ಸಂಪುಟ: 06 ಸಂಚಿಕೆ: 123 ಪುಟಗಳು: 08 ಗುರುವಾರ 16 ಜುಲೈ 2026
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

# ಉದಯ ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಯಾರು ಏನೇನು ಮಾಡ್ತಾ ಇದ್ದಾರೆ, ಹೇಗೆ, ಯಾಕೆ ಇತ್ಯಾದಿ ಅನವಶ್ಯಕ ವಿವರಗಳಿಂದ ದೂರ ಇದ್ದಷ್ಟೂ ಒತ್ತಡ ಕಮ್ಮಿಯಾಗಿ ಸುಖ ಹೆಚ್ಚುತ್ತದೆ!

# ಭಾರತ ಚೀನಾಗೆ ನಿರಾಳ

ಜಾಗತಿಕ ಇಂಧನ ಮಾರುಕಟ್ಟೆಯಲ್ಲಿ ಭಾರಿ ಪ್ರಭಾವ ಬೀರುವ ನಿರ್ಧಾರವೊಂದರಲ್ಲಿ, ರಷ್ಯಾದ ತೈಲ ಖರೀದಿದಾರ ರಾಷ್ಟ್ರಗಳ ಮೇಲೆ ವಿಧಿಸಲು ಉದ್ದೇಶಿಸಿದ್ದ ಸುಂಕವನ್ನು ಶೇ. 500 ರಿಂದ ಶೇ. 100ಕ್ಕೆ ಕಡಿತಗೊಳಿಸಲು ಅಮೆರಿಕ ಸೆನೆಟ್ ಸಮ್ಮತಿಸಿದೆ. ರಷ್ಯಾದ ಇಂಧನ ಆದಾಯವನ್ನು ತಡೆದು ಉಕ್ರೇನ್ ಮೇಲಿನ ದಾಳಿಯನ್ನು ಹತ್ತಿಕ್ಕುವುದು ಈ ಮಸೂದೆಯ ಉದ್ದೇಶವಾಗಿದ್ದರೂ, ತನ್ನ ಮಿತ್ರರಾಷ್ಟ್ರಗಳೊಂದಿಗಿನ ದ್ವಿಪಕ್ಷೀಯ ಸಂಬಂಧ ಕೆಡದಂತೆ ನೋಡಿಕೊಳ್ಳಲು ಕೈಗೊಂಡ ಈ ಕ್ರಮ ರಷ್ಯಾದ ಅತಿದೊಡ್ಡ ತೈಲ ಖರೀದಿದಾರರಾದ ಭಾರತ ಹಾಗೂ ಚೀನಾಗೆ ದೊಡ್ಡ ಸಮಾಧಾನ ತಂದಿದೆ. ಆದಾಗ್ಯೂ, ಭವಿಷ್ಯದಲ್ಲಿ ರಷ್ಯಾದ ಮೇಲಿನ ಅವಲಂಬನೆ ತಗ್ಗಿಸುವ ಷರತ್ತಿನ ಮೇಲಷ್ಟೇ ಈ ಸಡಲಿಕೆಯನ್ನು ನೀಡಲಾಗುತ್ತಿದೆ.



- ರಷ್ಯಾದಿಂದ ಅತಿಹೆಚ್ಚು ಕಚ್ಚಾತೈಲ ಖರೀದಿ ಮಾಡುವ ರಾಷ್ಟ್ರಗಳ ಮೇಲಿನ ಪ್ರಸ್ತಾವಿತ
- ಅಮೆರಿಕಾದ ಸೆನೆಟ್ ನಿರ್ಣಯದಿಂದ ಭಾರತ ಚೀನಾ ಸೇರಿ ರಷ್ಯಾದ ಟಾಪ್
- ಖರೀದಿದಾರ ರಾಷ್ಟ್ರಗಳಿಗೆ ಅನುಕೂಲ
- ಮಸೂದೆ ಕಾನೂನಾಗುವ ಮೊದಲೇ ಸುಂಕ ವಿಸ್ತರಣೆಯ







• ಉದಯವಾಹಿನಿ, ನವದೆಹಲಿ

ಉಕ್ರೇನ್ ಮೇಲಿನ ರಷ್ಯಾದ ಆಕ್ರಮಣವನ್ನು ಕೊನೆಗಾಣಿಸಲು ಅಮೆರಿಕ ಸಂಸದರು ರಷ್ಯಾ ವಿರುದ್ಧದ ಕಠಿಣ ನಿರ್ಬಂಧಗಳ ವಿಧೇಯಕದ ಹೊಸ ಆವೃತ್ತಿಯನ್ನು ಮಂಡಿಸಿದ್ದಾರೆ.ಈ ಪರಿಷ್ಕೃತ ವಿಧೇಯಕದಲ್ಲಿ ಭಾರತ ಮತ್ತು ಚೀನಾ ಸೇರಿದಂತೆ ರಷ್ಯಾದಿಂದ ಇಂಧನ ಆಮದು ಮಾಡಿಕೊಳ್ಳುವ ದೇಶಗಳ ಮೇಲಿನ ಮೂಲ 500% ರಷ್ಟು ಸುಂಕದ ಪ್ರಸ್ತಾಪವನ್ನು ಗಮನಾರ್ಹವಾಗಿ ಕಡಿಮೆಗೊಳಿಸಲಾಗಿದ್ದು, ಉಭಯ ದೇಶಗಳಿಗೆ ದೊಡ್ಡ ಮಟ್ಟದ ನಿರಾಳತೆ ಸಿಕ್ಕಂತಾಗಿದೆ. ದಿವಂಗತ ರಿಪಬ್ಲಿಕನ್ ಸೆನೆಟರ್ ಲಿಂಡ್ಸೆಗ್ರಹಾಂ ಮತ್ತು ಡೆಮೋಕ್ರಾಟಿಕ್ ಸೆನೆಟರ್ ರಿಚರ್ಡ್ ಬ್ಲೂಮೆಂತಾಲ್ ಅವರು ಜಂಟಿಯಾಗಿ ರೂಪಿಸಿದ್ದ ಈ ದ್ವಿಪಕ್ಷೀಯ ವಿಧೇಯಕದಲ್ಲಿ ಈಗ ಮಹತ್ವದ ಬದಲಾವಣೆಗಳನ್ನು ಮಾಡಲಾಗಿದೆ.

**1** ರಷ್ಯಾ ತೈಲ ಖರೀದಿದಾರರ ಮೇಲಿನ ಸುಂಕ ಬೆದರಿಕೆ

**2** ಶೇ.100ಕ್ಕೆ ಇಳಿಸಿದ ಅಮೆರಿಕ

**3** 5 ದೇಶದ ಮೇಲೆ ಮಸೂದೆ ಮಂಡಿಸಿದ ಯುಎಸ್

ರಷ್ಯಾದ ಕಚ್ಚಾತೈಲದ ಅತಿದೊಡ್ಡ ಆಮದುದಾರ ರಾಷ್ಟ್ರಗಳಲ್ಲಿ ಭಾರತ, ಚೀನಾ, ಸ್ಲೋವಾಕಿಯಾ, ಹಂಗೇರಿ ಮತ್ತು ಅಜರ್‌ಬೈಜಾನ್ ಸೇರಿವೆ. ನೈಸರ್ಗಿಕ ಅನಿಲದ ಪ್ರಮುಖ ಗ್ರಾಹಕರಲ್ಲಿ ಚೀನಾ, ಫ್ರಾನ್ಸ್, ಜಪಾನ್, ಹಂಗೇರಿ ಮತ್ತು ಬೆಲ್ಜಿಯಂ ಸೇರಿವೆ. ಇದೇ ವೇಳೆ, ರಷ್ಯಾದ ನೈಸರ್ಗಿಕ ಅನಿಲ ರಫ್ತಿನ ಶೇಕಡಾ 15ಕ್ಕಿಂತ ಕಡಿಮೆ ಪ್ರಮಾಣವನ್ನು ಮಾತ್ರ ಖರೀದಿಸುವ ಮತ್ತು ಆಮದನ್ನು ಇನ್ನಷ್ಟು ಕಡಿಮೆ ಮಾಡಲು ಪ್ರಯತ್ನಿಸುತ್ತಿರುವ ದೇಶಗಳಿಗೆ ವಿನಾಯಿತಿ ನೀಡುವ ಅವಕಾಶವನ್ನೂ ಮಸೂದೆಯಲ್ಲಿ ಸೇರಿಸಲಾಗಿದೆ. ಈ ನಿಯಮ ಜಾರಿಯಾದರೆ ಜಪಾನ್, ಫ್ರಾನ್ಸ್, ಹಂಗೇರಿ ಮತ್ತು ಬೆಲ್ಜಿಯಂ ಮುಂತಾದ ದೇಶಗಳು ವಿನಾಯಿತಿಗೆ ಅರ್ಹವಾಗಬಹುದು.

ಸುಂಕದ ಜೊತೆಗೆ, ಪಾಶ್ಚಾತ್ಯ ರಾಷ್ಟ್ರಗಳ ಹಡಗು ಮತ್ತು ವಿಮಾ ವ್ಯವಸ್ಥೆಗಳನ್ನು ತಪ್ಪಿಸಿ ರಷ್ಯಾದ ಕಚ್ಚಾತೈಲ ಸಾಗಿಸಲು ಬಳಸಲಾಗುತ್ತಿರುವ 'ಶ್ಯಾಡೋ ಫ್ಲೀಟ್' ತೈಲ ಟ್ಯಾಂಕರ್‌ಗಳ ಮೇಲೂ ಕಠಿಣ ನಿರ್ಬಂಧ ವಿಧಿಸುವ ಪ್ರಸ್ತಾಪ ಮಸೂದೆಯಲ್ಲಿದೆ.

ಇದಲ್ಲದೆ, ರಷ್ಯಾದ ಕೇಂದ್ರ ಬ್ಯಾಂಕ್, ಇತರೆ ಹಣಕಾಸು ಸಂಸ್ಥೆಗಳು ಹಾಗೂ ಯಮಾಲ್ ಎಲ್‌ಎನ್‌ಜಿ ಮತ್ತು ಆರ್ಕ್ಟಿಕ್ ಎಲ್‌ಎನ್‌ಜಿ ಸೇರಿದಂತೆ ಪ್ರಮುಖ ಇಂಧನ ಯೋಜನೆಗಳ ಮೇಲೂ ನಿರ್ಬಂಧ ವಿಸ್ತರಿಸಲು ಮಸೂದೆ ಸೂಚಿಸಿದೆ.ಮೂಲ ಮಸೂದೆಯಲ್ಲಿದ್ದ ಶೇಕಡಾ 500ರಷ್ಟು ಸುಂಕ ಅಮೆರಿಕದ ಮಿತ್ರ ರಾಷ್ಟ್ರಗಳಿಗೂ ಹೊಡೆತ ನೀಡಬಹುದು ಹಾಗೂ ಜಾಗತಿಕ ಇಂಧನ ಮಾರುಕಟ್ಟೆಯಲ್ಲಿ ಅಸ್ಥಿರತೆ ಉಂಟುಮಾಡಬಹುದು ಎಂಬ ಆತಂಕ ವ್ಯಕ್ತವಾದ ಹಿನ್ನೆಲೆಯಲ್ಲಿ ಈ ತಿದ್ದುಪಡಿಗಳನ್ನು ಮಾಡಲಾಗಿದೆ. ರಷ್ಯಾದಿಂದ ಇಂಧನ ಖರೀದಿಸುವ ದೇಶಗಳ ವಿರುದ್ಧ ಕಠಿಣ ಕ್ರಮಕ್ಕೆ ಕೆಲವರು ಒತ್ತಾಯಿಸಿದ್ದರೆ, ಶೇಕಡಾ 500ರಷ್ಟು ಸುಂಕ ಅತಿಯಾದ ಕ್ರಮ ಎಂದು ಹಲವು ಶಾಸಕರು ಅಭಿಪ್ರಾಯಪಟ್ಟಿದ್ದರು. ಹೆಸರನ್ನು ಬಹಿರಂಗಪಡಿಸಲು ಇಚ್ಛಿಸದ ಸೆನೆಟ್ ಸಹಾಯಕರೊಬ್ಬರು, ತಿದ್ದುಪಡಿ ಮಸೂದೆಗೆ ವ್ಯಾಪಕ ರಾಜಕೀಯ ಬೆಂಬಲ ದೊರೆತಿದೆ ಎಂದು ತಿಳಿಸಿದ್ದಾರೆ. ಪ್ರಸ್ತುತ ಎಲ್ಲರ ಒಪ್ಪಿಗೆ ಪಡೆದಿರುವ ಏಕೈಕ ಮಸೂದೆ ಇದಾಗಿದೆ. ರಷ್ಯಾದ ಮೇಲೆ ನಾವು ಬಯಸುವ ರೀತಿಯಲ್ಲಿ ಒತ್ತಡ ಹೇರುವ ಸಾಧ್ಯತೆ ಇರುವ ಏಕೈಕ ಪ್ರಸ್ತಾಪವೂ ಇದೇ ಆಗಿದೆ ಎಂದು ಅವರು ರಾಯಿಟರ್ಸ್ ಸುದ್ದಿಸಂಸ್ಥೆಗೆ ತಿಳಿಸಿದ್ದಾರೆ.ತಿದ್ದುಪಡಿ ಮಸೂದೆಯಲ್ಲಿ, ರಾಷ್ಟ್ರೀಯ ಹಿತಾಸಕ್ತಿಗೆ ಅಗತ್ಯವೆಂದು ಭಾವಿಸಿದರೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಿಗೆ ಈ ನಿರ್ಬಂಧಗಳನ್ನು ತಾತ್ಕಾಲಿಕವಾಗಿ ಅಮಾನತುಗೊಳಿಸುವ ಅಧಿಕಾರವನ್ನೂ ನೀಡಲಾಗಿದೆ. ಈ ಮಸೂದೆಯನ್ನು ಆರಂಭದಲ್ಲಿ ದಿವಂಗತ ರಿಪಬ್ಲಿಕನ್ ಸೆನೆಟರ್ ಲಿಂಡ್ಸೆ ಗ್ರಹಾಂ ಮತ್ತು ಡೆಮಾಕ್ರಟಿಕ್ ಸೆನೆಟರ್ ರಿಚರ್ಡ್ ಬ್ಲೂಮೆಂಥಾಲ್ ಮಂಡಿಸಿದ್ದರು. ಕಳೆದ ವಾರ ನಿಧನರಾಗುವ ಮೊದಲು ಗ್ರಹಾಂ ಅವರು, ಮಸೂದೆಯನ್ನು ಮುಂದಕ್ಕೆ ತೆಗೆದುಕೊಳ್ಳಲು ಟ್ರಂಪ್ ಅವರೊಂದಿಗೆ ಒಪ್ಪಂದ ಮಾಡಿಕೊಂಡಿರುವುದಾಗಿ ತಿಳಿಸಿದ್ದರು.

ಸೆನೆಟ್ ಬಹುಮತ ನಾಯಕ ಜಾನ್ ಥೂನ್ ಕೂಡ ಮಸೂದೆ ಮುಂದುವರಿಯುವ ವಿಶ್ವಾಸ ವ್ಯಕ್ತಪಡಿಸಿದ್ದು, ಈ ಮಸೂದೆಯನ್ನು ಅಂಗೀಕರಿಸಲು ಸಾಧ್ಯವಾದರೆ ಅದು ಲಿಂಡ್ಸೆ ಗ್ರಹಾಂ ಅವರಿಗೆ ಅತ್ಯಂತ ದೊಡ್ಡ ಪರಂಪರೆಯಾಗಲಿದೆ ಎಂದಿದ್ದಾರೆ.ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕೂಡ ಮಸೂದೆಗೆ ಬೆಂಬಲ ಸೂಚಿಸಿದ್ದು, ಇದು ಲಿಂಡ್ಸೆಯ ಗೌರವಾರ್ಥ. ಇದು ಅವರ ಕನಸಿನ ಯೋಜನೆಯಾಗಿತ್ತು.

## ಮಸೂದೆ ಶೀಘ್ರದಲ್ಲಿ ಅಂಗೀಕರಿಸಿ

೨೬ ಸೆನೆಟರ್‌ಗಳ ಬೆಂಬಲ ಮಸೂದೆಗೆ ಲಭ್ಯವಿದ್ದು, ಇನ್ನಷ್ಟು ಸದಸ್ಯರು ಬೆಂಬಲಿಸುವ ನಿರೀಕ್ಷೆಯಿದೆ. ಬ್ಲೂಮೆಂಥಾಲ್ ಅವರು ಈ ಮಸೂದೆಗೆ ಲಿಂಡ್ಸೆ ಗ್ರಹಾಂ ಅವರ ಹೆಸರಿಡಬೇಕು ಎಂದು ಹೇಳಿದ್ದು, ಇದು ಅವರ ಪರಂಪರೆಯ ಒಂದು ಭಾಗವಾಗಲಿದೆ ಎಂದು ಅಸೋಸಿಯೇಟೆಡ್ ಪ್ರೆಸ್ ವರದಿ ಉಲ್ಲೇಖಿಸಿದೆ.

ಸೆನೆಟ್‌ನ ಡೆಮಾಕ್ರಟಿಕ್ ನಾಯಕ ಚಕ್ ಶೂಮರ್, ಲಿಂಡ್ಸೆಯ ಗೌರವಾರ್ಥವಾಗಿ ಮಸೂದೆಯನ್ನು ಶೀಘ್ರದಲ್ಲಿ ಅಂಗೀಕರಿಸಬೇಕು ಎಂದು ಸದಸ್ಯರಿಗೆ ಕರೆ ನೀಡಿದ್ದು, ಇದು ಉಕ್ರೇನ್‌ಗೆ ನೆರವಾಗಲಿದೆ ಹಾಗೂ ಭಾರೀ ಬೆಂಬಲ ಪಡೆಯಲಿದೆ ಎಂದು ಹೇಳಿದ್ದಾರೆ.

## ಸುಂಕ ಹೆಚ್ಚಿಸುವ ಹಿಂಟ್ ಕೊಟ್ಟ ಟ್ರಂಪ್!

ಟ್ರಂಪ್ ಈ ನಿರ್ಣಯವನ್ನು ಬೆಂಬಲಿಸುವ ಜೊತೆಗೆ ಈ ಸುಂಕದ ಪ್ರಮಾಣವನ್ನು ವಿಸ್ತರಿಸುವ ಕುರಿತು ಹಿಂಟ್ ಸಹ ನೀಡಿದ್ದಾರೆ. ಈ ಮಸೂದೆಯು ದಿವಂಗತ ಲಿಂಡ್ಸೆ ಗ್ರಾಹಂ ಅವರ ಗೌರವಾರ್ಥವಾಗಿದೆ. ಆದಾಗ್ಯೂ, ಅವರು ಇದಕ್ಕಿಂತ ಹೆಚ್ಚಿನದನ್ನು ಬಯಸಿದ್ದರು. ಅವರು ಹೇಗಿರಬೇಕೆಂದು ಬಯಸಿದ್ದು, ನಿಮಗೆ ತಿಳಿದಿದೆ. ಅದು ನೇರವೇರುವ ಸಾಧ್ಯತೆ ಹೆಚ್ಚಿದ್ದು, ಇದು ಕಾನೂನಾಗುವ ಸಾಧ್ಯತೆಗಳು ಅಧಿಕವಾಗುವ ಸಾಧ್ಯತೆಯಿದೆ ಎಂದು ತಿಳಿಸಿದ್ದಾರೆ.

## ರಷ್ಯಾದ ತೈಲ ಆದಾಯದ ಮೇಲೇಕೆ ಅಮೆರಿಕಾ ಕಣ್ಣು?

ಈ ಮಸೂದೆಯು ಪ್ರಮುಖವಾಗಿ ಸಾಂಪ್ರದಾಯಿಕ ಪಾಶ್ಚಿಮಾತ್ಯ ಹಡಗು ಮತ್ತು ವಿಮಾ ಜಾಲಗಳ ನಿರ್ಬಂಧಗಳನ್ನು ಅತಿಕ್ರಮಿಸಿ ತೈಲವನ್ನು ಸಾಗಿಸಲು ರಷ್ಯಾ ಬಳಸುವ ನೆರಳು ಫ್ಲೀಟ್‌ಗಳನ್ನು ಗುರಿಯಾಗಿಸಿದೆ.

ಜೊತೆಗೆ ಸೆಂಟ್ರಲ್ ಬ್ಯಾಂಕ್ ಆಫ್ ರಷ್ಯಾ ಸೇರಿದಂತೆ ರಷ್ಯಾದ ಹಣಕಾಸು ಸಂಸ್ಥೆಗಳ ವಿರುದ್ಧದ ನಿರ್ಬಂಧಗಳನ್ನು ಯಮಲ್ ಮತ್ತು ಆರ್ಕ್ಟಿಕ್ ಯೋಜನೆಗಳಂತಹ ಪ್ರಮುಖ ರಾಜ್ಯ ಬೆಂಬಲಿತ ಇಂಧನ ಯೋಜನೆಗಳ ಮೇಲಿನ ನಿರ್ಬಂಧಗಳನ್ನು ವಿಧಿಸುವುನ್ನು ಒಳಗೊಂಡಿದೆ.

## ಸುಂಕ ಇಳಿಕೆಯಿಂದ ಭಾರತಕ್ಕೆ ಲಾಭ

ಇನ್ನು, ರಷ್ಯಾದ ತೈಲ ಖರೀದಿದಾರರ ಮೇಲಿನ ಅಮೆರಿಕಾದ ಈ ನಿರ್ಬಂಧಗಳ ಸಡಲಿಕೆಯಿಂದ ಭಾರತಕ್ಕೆ ಹೆಚ್ಚು ಲಾಭವಾಗಲಿದೆ. ಇದಕ್ಕೆ ಕಾರಣ 2022 ರಲ್ಲಿ ಉಕ್ರೇನ್ ಯುದ್ಧ ಪ್ರಾರಂಭವಾದಾಗಿನಿಂದ ರಿಯಾಯಿತಿ ದರದಲ್ಲಿ ರಷ್ಯಾದ ಕಚ್ಚಾ ತೈಲವನ್ನು ಖರೀದಿಸುವ ಅತಿದೊಡ್ಡ ದೇಶಗಳಲ್ಲಿ ಭಾರತ ಒಂದಾಗಿದ್ದು, ಮಸೂದೆ ಅಂತಿಮವಾಗಿ ಕಾನೂನಾದರೆ ಪರಿಷ್ಕೃತ ಪ್ರಸ್ತಾವನೆಯು ಈ ಹಿಂದಿನ ಶೇ.500ರಷ್ಟು ಸುಂಕ ಯೋಜನೆಯಿಂದ ಉಂಟಾಗುವ ತಕ್ಷಣದ ಬೆದರಿಕೆಯನ್ನು ಕಡಿಮೆ ಮಾಡಲಿದ್ದು, ಶೇ.100 ರಷ್ಟು ಸುಂಕಗಳು ಬೀಳಲಿದ್ದರೂ ಹೆಚ್ಚಿನ ನಷ್ಟದಿಂದ ತಪ್ಪಿಸಿಕೊಳ್ಳು ಸಹಕಾರಿಯಾಗಲಿದೆ.

## ಕುಡಿಯಲು ನೀರು ಕೊಡಿ ಅಂತ CWRC ಆದೇಶ: ರಾಮಲಿಂಗಾ ರೆಡ್ಡಿ

• ಉದಯವಾಹಿನಿ, ಬೆಂಗಳೂರು

ದೆಹಲಿಯಲ್ಲಿ ನಡೆದ CWRC ಬೋರ್ಡ್ ಕುಡಿಯಲು ನೀರು ಮೀಸಲು ಇಡಿ ಎಂದು ಆದೇಶ ಮಾಡಿದೆ ಅಂತ ಜಲಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ. ವಿಧಾನಸೌಧದಲ್ಲಿ ಮಾತನಾಡಿದ ಅವರು, ಇವತ್ತು ದೆಹಲಿಯಲ್ಲಿ CWRC ಮೀಟಿಂಗ್ ನಡೆದಿದೆ. ಬೋರ್ಡ್ ಅವರು ಕುಡಿಯೋ ನೀರು ಕೊಡಿ ಅಂತ ಆದೇಶ ಮಾಡಿದ್ದಾರೆ. ತಮಿಳುನಾಡು ಅವರು ನೀರು ಬಿಡಲು ಡಿಮ್ಯಾಂಡ್ ಇಟ್ಟಿದ್ದಾರೆ. ನಮ್ಮ ರಾಜ್ಯದ ಅಡ್ವೈಸರ್ ಗಳು ವಿಸಿ ಮೀಟಿಂಗ್ ನಲ್ಲಿ ನಮ್ಮ ರಾಜ್ಯದ ಸ್ಥಿತಿಗತಿ ಬಗ್ಗೆ ಮಾಹಿತಿ ಕೊಟ್ಟಿದ್ದಾರೆ. ಬೋರ್ಡ್ ಕುಡಿಯುವ ನೀರಿಗೆ ಆದೇಶ ಮಾಡಿದ್ದಾರೆ ಎಂದರು. ತಕ್ಷಣ ತಮಿಳುನಾಡಿಗೆ ನೀರು ಬಿಡಲ್ಲ. ತಮಿಳುನಾಡಿಗೆ ನೀರು ಬಿಡಿ ಅಂತ ಆದೇಶ ಮಾಡಿಲ್ಲ. ಅದಕ್ಕೆ ನೀರು ಬಿಡಲ್ಲ. ನೀರು ಬಿಡುತ್ತಾರೆ ಅಂತ ಯಾರು ಬೇಕಾದರೂ ಆರೋಪ ಮಾಡಲಿ. ಆದರೆ ಎಷ್ಟು ನೀರು ಬಿಡಲಾಗಿದೆ ಅಂತ ಬಿಳಿಗೊಂಡ್ಲುವಿನಲ್ಲಿ ಗೊತ್ತಾಗುತ್ತದೆ.

## ಆಲಮಟ್ಟಿ ಡ್ಯಾಂನಿಂದ ಕೆರೆಗಳಿಗೆ ನೀರು ಹರಿಸಿ ಸಿಎಂ ಡಿಕೆಶಿಗೆ ಮಾಜಿ ಸಚಿವ ಶಿವಾನಂದ ಪಾಟೀಲ್ ಮನವಿ

• ಉದಯವಾಹಿನಿ, ಬೆಂಗಳೂರು



ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಯ ಜನ ಜಾನುವಾರುಗಳ ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ಲಾಲ್‌ಬಹದ್ದೂರ್ ಶಾಸ್ತ್ರಿ ಜಲಾಶಯದಿಂದ ಕಾಲುವೆಗಳಿಗೆ ನೀರು ಬಿಡುಗಡೆ ಮಾಡಲು ಆದೇಶ ಮಾಡಿ ಎಂದು ಶಾಸಕ, ಮಾಜಿ ಸಚಿವ ಶಿವಾನಂದ ಪಾಟೀಲ್ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಮನವಿ ಮಾಡಿದ್ದಾರೆ.

ಆಲಮಟ್ಟಿ ಜಲಾಶಯ ಮುಂಗಾರಿನಲ್ಲಿ ಭರ್ತಿಯಾಗದಿದ್ದರೂ ಹಿಂಗಾರಿನಲ್ಲಿ ಭರ್ತಿಯಾಗುವ ವಿಶ್ವಾಸ ಇದೆ. ಜಲಾಶಯ ಹಿಂಗಾರಿನಲ್ಲೂ ಭರ್ತಿಯಾದ ಹಲವು ನಿದರ್ಶನಗಳಿವೆ. ಹೀಗಾಗಿ ಈಗಲೇ ಜಲಾಶಯದಿಂದ ಕಾಲುವೆಗಳಿಗೆ ನೀರು ಬಿಡುಗಡೆ ಮಾಡಿದರೆ ಭವಿಷ್ಯದ ದಿನಗಳಲ್ಲಿ ನೀರಿನ ಕೊರತೆಯಾಗಬಹುದು ಎಂದು ಆತಂಕ ಪಡುವ ಅಗತ್ಯವಿಲ್ಲ ಎಂದು ಅವರು ಮುಖ್ಯಮಂತ್ರಿಗಳಿಗೆ ಬರೆದಿರುವ ಪತ್ರದಲ್ಲಿ ವಿವರಿಸಿದ್ದಾರೆ. ಜಲಾಶಯದಲ್ಲಿ ಈಗ ಬಳಸಬಹುದಾದ ನೀರಿನ ಪ್ರಮಾಣ 70 ಟಿಎಂಸಿ ಅಡಿ ನೀರಿದೆ. ಜಲಾಶಯ ಭರ್ತಿಯಾಗಲು 35 ಟಿಎಂಸಿ ನೀರು ಅಗತ್ಯವಿದೆ. ಮುಂಗಾರು ಇನ್ನೂ ಮುಗಿದಿಲ್ಲ.

ಜಲಾಶಯ ಭರ್ತಿಯಾಗುವ ವಿಶ್ವಾಸ ಇದೆ ಎಂದಿದ್ದಾರೆ. ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಯ ಹಲವೆಡೆ ಕುಡಿಯುವ ನೀರಿನ ಸಮಸ್ಯೆ ಗಂಭೀರವಾಗಿದೆ. ನೀರಾವರಿ ಸಲಹಾ ಸಮಿತಿ ಸಭೆ ಕರೆದು ಚರ್ಚೆ ಮಾಡಿದ ನಂತರ ನೀರು ಹರಿಸುವ ನಿರ್ಧಾರ ಕೈಗೊಳ್ಳುವತನಕ ಕಾದು ಕುಳಿತುಕೊಳ್ಳುವ ಸಮಯ ಇದಲ್ಲ.

## ಮತ್ತೆ ಫುಟ್‌ಪಾತ್ ಮೇಲೆ ಅಂಗಡಿ ಇಟ್ಟರೆ ಭಾರೀ ದಂಡ ಗ್ಯಾರಂಟಿ

• ಉದಯವಾಹಿನಿ, ಬೆಂಗಳೂರು

ತೆರವುಗೊಳಿಸಿದ ಜಾಗದಲ್ಲಿ ಮತ್ತೆ ಫುಟ್‌ಪಾತ್ ಮೇಲೆ ಅಂಗಡಿಯನ್ನು ಆರಂಭಿಸಿದರೆ ದಂಡ ವಿಧಿಸುವಂತೆ ಬೆಂಗಳೂರು ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಖಡಕ್ ಆದೇಶ ನೀಡಿದ್ದಾರೆ. ಇತ್ತೀಚೆಗಷ್ಟೇ ಬರೋಬ್ಬರಿ 490 ಕಿಲೋಮೀಟರ್‌ನಷ್ಟು ಸುದೀರ್ಘ ಫುಟ್‌ಪಾತ್ ತೆರವು ಕಾರ್ಯಾಚರಣೆಯನ್ನು ಯಶಸ್ವಿಯಾಗಿ ನಡೆಸಲಾಗಿತ್ತು. ಯಾವುದೇ ಕಾರಣಕ್ಕೂ ಫುಟ್‌ಪಾತ್‌ಗಳ ಮೇಲೆ ವ್ಯಾಪಾರ ಮಾಡಬಾರದು ಎಂದು ಬಿಬಿಎಂಪಿ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ವ್ಯಾಪಾರಸ್ಥರಿಗೆ ಖಡಕ್ ಎಚ್ಚರಿಕೆಯನ್ನೂ ನೀಡಿದ್ದರು.

ಬೆಂಗಳೂರಿನ ಅತ್ಯಂತ ಜನನಿಬಿಡ ಪ್ರದೇಶಗಳಾದ ಕೆ.ಆರ್. ಮಾರ್ಕೆಟ್ ರಸ್ತೆ ಹಾಗೂ ವಿಕ್ಟೋರಿಯಾ ಆಸ್ಪತ್ರೆ ರಸ್ತೆಗಳಲ್ಲಿ ಇತ್ತೀಚೆಗೆ ಜೆಸಿಬಿಗಳ ಮೂಲಕ ದೊಡ್ಡ ಮಟ್ಟದ ಫುಟ್‌ಪಾತ್ ತೆರವು ಕಾರ್ಯಾಚರಣೆ ನಡೆಸಲಾಗಿತ್ತು.

ಕಾರ್ಯಾಚರಣೆ ಮುಗಿದು ಮೂರ್ನಾಲ್ಕು ದಿನ ಕಳೆಯುವಷ್ಟರಲ್ಲೇ ವಿಕ್ಟೋರಿಯಾ ಆಸ್ಪತ್ರೆ ರಸ್ತೆಯ ಫುಟ್‌ಪಾತ್‌ಗಳ ಮೇಲೆ ವ್ಯಾಪಾರಸ್ಥರು ಮತ್ತೆ ಅಕ್ರಮವಾಗಿ ಅಂಗಡಿಗಳನ್ನು ಹೂಡಿ, ವ್ಯಾಪಾರ ಶುರು ಮಾಡಿದ್ದಾರೆ.

ಇದು ಸಾರ್ವಜನಿಕರ ತೀವ್ರ ಆಕ್ರೋಶಕ್ಕೆ ಕಾರಣವಾಗಿತ್ತು. ಫುಟ್‌ಪಾತ್ ತೆರವುಗೊಳಿಸಿದ ಜಾಗದಲ್ಲಿ ಮತ್ತೆ ಅತಿಕ್ರಮಣವಾಗಿರುವ ವಿಷಯ ತಿಳಿಯುತ್ತಿದ್ದಂತೆ ಗರಂ ಆದ ಸಚಿವ ಕೃಷ್ಣಬೈರೇಗೌಡರು ಬಿಬಿಎಂಪಿ ಅಧಿಕಾರಿಗಳಿಗೆ ಮಹತ್ವದ ನಿರ್ದೇಶನ ನೀಡಿದ್ದಾರೆ.

## ಬೆಂಗಳೂರಲ್ಲಿ ಟ್ರಾಫಿಕ್ ಸಮಸ್ಯೆ ನಿವಾರಣೆಗೆ ಕ್ರಮ: ಸಿಗ್ನಲ್ ಸಮೀಪವಿರುವ ಬಸ್ ನಿಲ್ದಾಣಗಳ ತೆರವಿಗೆ ಸಚಿವ ಕೃಷ್ಣ ಬೈರೇಗೌಡ ಸೂಚನೆ

• ಉದಯವಾಹಿನಿ, ಬೆಂಗಳೂರು

ಕೃಷ್ಣ ಬೈರೇಗೌಡ ಅವರು ಬೆಂಗಳೂರು ನಗರಾಭಿವೃದ್ಧಿ ಸಚಿವರಾಗಿ ಅಧಿಕಾರವಹಿಸಿಕೊಂಡ ಬಳಿಕ ನಗರದಲ್ಲಿನ ಪ್ರಮುಖ ಸಮಸ್ಯೆಗಳ ನಿವಾರಣೆಗೆ ಕ್ರಮಕ್ಕೆ ಮುಂದಾಗಿದ್ದು, ಈಗಾಗಲೇ ಫುಟ್‌ಪಾತ್ ಒತ್ತುವರಿ ತೆರವು, ಬಿಡಾಡಿ ವಾಹನಗಳ ಎತ್ತಂಗಡಿ ಸೇರಿ ಕೆಲವು ಮಹತ್ವದ ನಿರ್ಧಾರಗಳನ್ನು ಕೈಗೊಂಡಿದ್ದಾರೆ. ಇವುಗಳ ಜೊತೆಗೀಗ ನಗರದಲ್ಲಿನ ಟ್ರಾಫಿಕ್ ಸಮಸ್ಯೆ ನಿವಾರಣೆ ನಿಟ್ಟಿನಲ್ಲೂ ಸಚಿವರು ಕಾರ್ಯಪ್ರವೃತ್ತರಾಗಿದ್ದು, ಸಿಗ್ನಲ್‌ಗಳಿಂದ 75 ಮೀಟರ್ ಒಳಗಿರುವ ಬಸ್ ನಿಲ್ದಾಣಗಳ ಸ್ಥಳಾಂತರಕ್ಕೆ ಸೂಚನೆ ನೀಡಿದ್ದಾರೆ. ಇತ್ತೀಚೆಗೆ ಸಚಿವ ಕೃಷ್ಣಬೈರೇಗೌಡ ಅವರ ನೇತೃತ್ವದಲ್ಲಿ ನಡೆದ ಉನ್ನತ ಮಟ್ಟದ ಸಭೆಯಲ್ಲಿ ನಗರದ ಟ್ರಾಫಿಕ್ ಸಮಸ್ಯೆಗೆ ಪ್ರಮುಖ ಪರಿಹಾರವಾಗಿ ಈ ಮಹತ್ವದ ತೀರ್ಮಾನವನ್ನು ತೆಗೆದುಕೊಳ್ಳಲಾಗಿದೆ.


## ಶಾಶ್ವತ ನಿವಾಸಿ ಪ್ರಮಾಣಪತ್ರ ವಿರುದ್ಧ ಬಿಜೆಪಿ ಸಮರ ರಾಜ್ಯಪಾಲರಿಗೆ ದೂರು

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಶಾಶ್ವತ ನಿವಾಸ ಪ್ರಮಾಣ ಪತ್ರ ನೀಡುವ ಬಗ್ಗೆ ವಿರೋಧ ವ್ಯಕ್ತಪಡಿಸಿದ್ದ ಬಿಜೆಪಿ ಇದೀಗ ರಾಜ್ಯಪಾಲರಿಗೆ ದೂರು ನೀಡಿದೆ.ಆರ್.ಅಶೋಕ್, ಛಲವಾದಿ ನಾರಾಯಣ ಸ್ವಾಮಿ, ಸಿಟಿ ರವಿ, ಸುಧಾಕರ್ ಮತ್ತಿತರಿದ್ದ ಬಿಜೆಪಿ ನಿಯೋಗವು ರಾಜ್ಯಪಾಲರಿಗೆ ದೂರು ಸಲ್ಲಿಸಿದೆ. ದೂರಿನಲ್ಲಿ ಪಿಆರ್‌ಸಿ ನೀಡಲು ರಾಜ್ಯ ಸರ್ಕಾರಕ್ಕೆ ಅಧಿಕಾರ ಇಲ್ಲ. ಪಿಆರ್‌ಸಿ ದೇಶದ ಭದ್ರತೆಗೆ ಆತಂಕ ತರಲಿದೆ. ಸರ್ಕಾರದ ಪಿಆರ್‌ಸಿಗೆ ತಡೆಯೊಡ್ಡಲು ಮಧ್ಯಪ್ರವೇಶ ಮಾಡುವಂತೆ ಮನವಿ ಮಾಡಿದ್ದಾರೆ. ಇನ್ನೂ ಪಿಆರ್‌ಸಿ ಜೊತೆಗೆ ಮತ್ತೆರಡು ಪ್ರಕರಣದ ಬಗ್ಗೆಯೂ ಬಿಜೆಪಿ ರಾಜ್ಯಪಾಲರಿಗೆ ದೂರು ನೀಡಿದೆ.

ಚಿಕ್ಕಮಗಳೂರಿನಲ್ಲಿ ಬಡವರ ಹೆಸರಲ್ಲಿ ನಕಲಿ ಬ್ಯಾಂಕ್ ಖಾತೆ ತೆರೆದು ವಂಚನೆ ಪ್ರಕರಣ ಹಾಗೂ ಮಾಲೂರು ತಾಲ್ಲೂಕು ಅಗ್ಗಲಕೋಟೆ ಗ್ರಾಮದಲ್ಲಿ ಶಾಲಾ ಜಮೀನು ಅಕ್ರಮವಾಗಿ ಮಾರಾಟ ಮಾಡಿದ ಪ್ರಕರಣವನ್ನು ಬಿಜೆಪಿ ರಾಜ್ಯಪಾಲರ ಗಮನಕ್ಕೆ ತಂದು ದೂರು ನೀಡಿದೆ. ಇವರೆಡೂ ಪ್ರಕರಣಗಳ ಸಮಗ್ರ ಹಾಗೂ ಉನ್ನತ ಮಟ್ಟದ ತನಿಖೆಗೆ ಆಗ್ರಹಿಸಿದೆ. ದೂರಿನ ನಂತರ ವಿಪಕ್ಷ ನಾಯಕ ಆರ್.ಅಶೋಕ್ ಮಾತನಾಡಿ, ಅಕ್ರಮವಾಗಿ ಪಿಆರ್‌ಸಿ ಮಾಡಲು ಸರ್ಕಾರ ಹೊರಟಿದೆ.

ಇದನ್ನು ತಡೆಯುವಂತೆ ಕೋರಿ ರಾಜ್ಯಪಾಲರಿಗೆ ದೂರು ಕೊಟ್ಟಿದ್ದೇವೆ. ಅಕ್ರಮ ನಿವಾಸಿಗಳಿಗೆ, ಕಾಂಗ್ರೆಸ್ ಗೆ ವೋಟು ಹಾಕೋರಿಗೆ ಶಾಶ್ವತ ನಿವಾಸ ಪ್ರಮಾಣ ಪತ್ರ ಕೊಡುವ ಸಂಚು ನಡೀತಿದೆ. ಸರ್ಕಾರದ ನಡೆ ದೇಶದ ಭದ್ರತೆಗೆ ಅಪಾಯ. ಬಾಂಗ್ಲಾ ವಾಸಿಗಳು 20-30 ಲಕ್ಷ ಜನ ರಾಜ್ಯದಲ್ಲಿ ಇದ್ದಾರೆ. ಇವರನ್ನು ರಾಜ್ಯದ ಶಾಶ್ವತ ನಿವಾಸಿಗಳಾಗಿ ಮಾಡಲು ಸರ್ಕಾರ ಹೊರಟಿದೆ. ಜಿಬಿಎ, ಜಿ.ಪಂ, ತಾ.ಪಂ, ವಿಧಾನಸಭೆ ಚುನಾವಣೆಗೆ ಅಕ್ರಮವಾಗಿ ಪಿಆರ್‌ಸಿ ಕೊಡಲಾಗ್ತಿದೆ. ಕೂಡಲೇ ಇದನ್ನು ರದ್ದುಪಡಿಸಲು ರಾಜ್ಯಪಾಲರಿಗೆ ಕೋರಿದ್ದೇವೆ. ಪಿಆರ್‌ಸಿ ಕೊಡೋ ಅಧಿಕಾರ ರಾಜ್ಯಕ್ಕೆ ಇಲ್ಲ, ಕೇಂದ್ರಕ್ಕೆ ಮಾತ್ರ ಇರೋದು. ಸರ್ಕಾರಕ್ಕೆ ಎಚ್ಚರಿಸುವುದಾಗಿ ರಾಜ್ಯಪಾಲರು ಹೇಳಿದ್ದಾರೆ ಎಂದು ತಿಳಿಸಿದ್ದಾರೆ.



### ಬಿಜೆಪಿ ಮನವಿಯಲ್ಲೇನಿದೆ?

ಸಂವಿಧಾನದ ರಕ್ಷಕರಾಗಿರುವ ನಿಮ್ಮ ಗಮನಕ್ಕೆ ಈ ವಿಷಯವನ್ನು ತರಲು ಬಯಸುತ್ತೇವೆ. ಈ ಅಧಿಸೂಚನೆಯು ರಾಜ್ಯದ ಹಿತಾಸಕ್ತಿ, ಭಾರತದ ಒಕ್ಕೂಟ ವ್ಯವಸ್ಥೆಯ ತತ್ವಗಳು ಹಾಗೂ ರಾಷ್ಟ್ರೀಯ ಭದ್ರತೆಗೆ ಧಕ್ಕೆ ತರುವ ಸಾಧ್ಯತೆ ಇದೆ ಎಂದು ಬಿಜೆಪಿ ತಿಳಿಸಿದೆ. ವಿದೇಶಿಯರ ಗುರುತಿಸುವಿಕೆ, ಪೌರತ್ವ, ವಿದೇಶಿಯರ ಭಾರತ ಪ್ರವೇಶ ಹಾಗೂ ವಲಸೆ ಸಂಬಂಧಿತ ವಿಷಯಗಳು ಸಂಪೂರ್ಣವಾಗಿ ಕೇಂದ್ರ ಸರ್ಕಾರದ ಅಧಿಕಾರ ವ್ಯಾಪ್ತಿಗೆ ಒಳಪಟ್ಟಿದ್ದು, ಸಂವಿಧಾನದ ಕೇಂದ್ರ ಪಟ್ಟಿಯ ಅಡಿಯಲ್ಲಿ ಬರುತ್ತವೆ ಎಂದು ಬಿಜೆಪಿ ಮನವಿಯಲ್ಲಿ ಉಲ್ಲೇಖಿಸಿದೆ. ಆದ್ದರಿಂದ ಶಾಶ್ವತ ನಿವಾಸಿ ಎಂಬ ಹೊಸ ವರ್ಗವನ್ನು ಸೃಷ್ಟಿಸುವ ಸಂವಿಧಾನಾತ್ಮಕ ಅಥವಾ ಕಾನೂನುಬದ್ಧ ಅಧಿಕಾರ ರಾಜ್ಯ ಸರ್ಕಾರಕ್ಕೆ ಇಲ್ಲ. ಇಂತಹ ಕ್ರಮವು ಭಾರತದ ಒಕ್ಕೂಟ ವ್ಯವಸ್ಥೆಯ ಮೂಲ ತತ್ವಗಳನ್ನೇ ದುರ್ಬಲಗೊಳಿಸುವ ಸಾಧ್ಯತೆ ಇದೆ ಎಂದು ಪಕ್ಷ ವಾದಿಸಿದೆ.

## ರೈತ ವಿರೋಧಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ಹೋರಾಟ ತೀವ್ರ: ಬಿ.ವೈ.ವಿಜಯೇಂದ್ರ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಬಡವರು ಹಾಗೂ ರೈತರ ವಿರೋಧಿ ಆಡಳಿತ ನಡೆಸುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ.ವೈ.ವಿಜಯೇಂದ್ರ ಅವರು ಆರೋಪಿಸಿದರು. ಬಳ್ಳಾರಿಯಲ್ಲಿ ಇಂದು ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ ಅವರಿಗೆ ರೈತರಿಗಿಂತ ರಿಯಲ್ ಎಸ್ಟೇಟ್‌ಗೆ ಹೆಚ್ಚಿನ ಆದ್ಯತೆ ಇದೆ ಎಂದು ಟೀಕಿಸಿದರು.



ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ನೀರಾವರಿ ಸಚಿವರಾಗಿದ್ದ ಸಂದರ್ಭದಲ್ಲಿ ತುಂಗಭದ್ರಾ ಜಲಾಶಯದ ಕ್ರಸ್ಟ್ ಗೇಟ್ ದುರಸ್ತಿಗೆ 24 ತಿಂಗಳು ತೆಗೆದುಕೊಂಡ ಪರಿಣಾಮ ರೈತರು ಎರಡನೇ ಬೆಳೆ ಬೆಳೆಯಲು ಸಾಧ್ಯವಾಗದೆ ಅಪಾರ ನಷ್ಟ ಅನುಭವಿಸಿದರು. ಆದರೆ, ಮುಖ್ಯಮಂತ್ರಿ ಆದ 24 ಗಂಟೆಗಳಲ್ಲೇ ಬಿಡದಿ ಟೌನ್‌ಶಿಪ್‌ಗೆ ಸಂಬಂಧಿಸಿದ ಆದೇಶ ಹೊರಡಿಸಿದ್ದಾರೆ ಎಂದು ಆರೋಪಿಸಿದರು.

ಬಿಡದಿ ಟೌನ್‌ಶಿಪ್ ಯೋಜನೆಯಿಂದ ಫಲವತ್ತಾದ ಕೃಷಿ ಭೂಮಿಯನ್ನು ಕಳೆದುಕೊಳ್ಳುವ ಪರಿಸ್ಥಿತಿ ನಿರ್ಮಾಣವಾಗಿರುವುದರಿಂದ ರೈತರು ಪ್ರತಿಭಟನೆ ನಡೆಸುತ್ತಿದ್ದಾರೆ. ರೈತರು ಮತ್ತು ಮಹಿಳೆಯರು ಪೊರಕೆ ಹಿಡಿದು ಪ್ರತಿಭಟಿಸುವ ಸ್ಥಿತಿ ನಿರ್ಮಾಣವಾಗಿರುವುದಕ್ಕೆ ರೈತ ವಿರೋಧಿ ಮುಖ್ಯಮಂತ್ರಿ ಹಾಗೂ ಕಾಂಗ್ರೆಸ್ ಸರ್ಕಾರವೇ ಕಾರಣ ಎಂದು ಹೇಳಿದರು. ಮುಖ್ಯಮಂತ್ರಿಗಳು ರೈತರೊಂದಿಗೆ ಚೆಲ್ಲಾಟ ಆಡದೇ, ರೈತರ ಪರವಾದ ನಿರ್ಧಾರಗಳನ್ನು ಕೈಗೊಳ್ಳಬೇಕು ಎಂದು ಆಗ್ರಹಿಸಿದ ಅವರು, ಬಿಡದಿ ಟೌನ್ ಶಿಪ್ ವಿರೋಧಿಸಿ ಹೋರಾಟ ನಡೆಸುತ್ತಿರುವ ರೈತರು ಹಾಗೂ ವಿವಿಧ ಸಂಘಟನೆಗಳ ಮುಖಂಡರ ವಿರುದ್ಧ ದಾಖಲಿಸಿರುವ ಪ್ರಕರಣಗಳನ್ನು ತಕ್ಷಣವೇ ಹಿಂಪಡೆಯಬೇಕು ಎಂದು ಒತ್ತಾಯಿಸಿದರು. ರೈತರ ಮೇಲಿನ ಸರ್ಕಾರದ ದಬ್ಬಾಳಿಕೆಯನ್ನು ಕೂಡಲೇ ನಿಲ್ಲಿಸಬೇಕು ಎಂದು ಆಗ್ರಹಿಸಿದರು. ಜುಲೈ 17ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಬಿಜೆಪಿ ಶಾಸಕರು, ಸಂಸದರು, ಮಾಜಿ ಶಾಸಕರು ಹಾಗೂ ಮಾಜಿ ಸಂಸದರು ಬೆಳಗ್ಗೆಯಿಂದ ಸಂಜೆವರೆಗೆ ಧರಣಿ ನಡೆಸಲಿದ್ದು, ರೈತರ ವಿರುದ್ಧ ದಾಖಲಿಸಿರುವ ಪ್ರಕರಣಗಳನ್ನು ಹಿಂಪಡೆಯುವುದು ಹಾಗೂ ಬಿಡದಿ ಟೌನ್‌ಶಿಪ್ ಯೋಜನೆಯನ್ನು ಕೈಬಿಡುವಂತೆ ಒತ್ತಾಯಿಸಲಾಗುವುದು ಎಂದು ವಿಜಯೇಂದ್ರ ತಿಳಿಸಿದರು. ಬರಗಾಲದ ಕುರಿತು ಮುಖ್ಯಮಂತ್ರಿ ಅವರು ಪ್ರಧಾನಮಂತ್ರಿಗೆ ಪತ್ರ ಬರೆದು ರಾಜ್ಯದಲ್ಲಿ ಭೀಕರ ಬರ ಪರಿಸ್ಥಿತಿ ಇದೆ ಹಾಗೂ ಕೇಂದ್ರ ಸರ್ಕಾರ ಅಧಿಕಾರಿಗಳ ತಂಡವನ್ನು ರಾಜ್ಯಕ್ಕೆ ಕಳುಹಿಸಬೇಕು ಎಂದು ಮನವಿ ಮಾಡಿದ್ದಾರೆ. ಇಂತಹ ಗಂಭೀರ ಪರಿಸ್ಥಿತಿಯಲ್ಲಿಯೂ ಮುಖ್ಯಮಂತ್ರಿ ಹಾಗೂ ಸಚಿವರು ಜಿಲ್ಲೆಗಳ ಪ್ರವಾಸ ಕೈಗೊಳ್ಳದಿರುವುದು ಆಶ್ಚರ್ಯಕರವಾಗಿದೆ ಎಂದು ವಿಜಯೇಂದ್ರ ಹೇಳಿದರು.

# ಸದ್ಯಕ್ಕೆ ತಮಿಳುನಾಡಿಗೆ ನೀರು ಹರಿಸ ಬೇಕಿಲ್ಲ : ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಸೂಚನೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಲ್ಲಿ ವಾಡಿಕೆಯಂತೆ ಈ ಬಾರಿ ಕಾವೇರಿ ಜಲಾಯನ ಪ್ರದೇಶದಲ್ಲಿ ಮಳೆಯಾಗದ ಹಿನ್ನೆಲೆಯಲ್ಲಿ ತಮಿಳುನಾಡಿಗೆ ಸದ್ಯಕ್ಕೆ ಕೆಆರ್‌ಎಸ್ ಅಣೆಕಟ್ಟಿನಿಂದ ನೀರು ಹರಿಸದೆ ಯಥಾಸ್ಥಿತಿ ಕಾಪಾಡಿಕೊಳ್ಳಬೇಕೆಂದು ಉಭಯ ರಾಜ್ಯಗಳಿಗೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ(ಸಿಡಬ್ಲ್ಯುಎಂಎ) ಸೂಚನೆ ನೀಡಿದೆ. ನವದೆಹಲಿಯಲ್ಲಿಂದು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ವ್ಯಾಪ್ತಿಗೆ ಬರುವ ಕರ್ನಾಟಕ ತಮಿಳುನಾಡು ಮತ್ತು ಪುದುಚೇರಿ ರಾಜ್ಯಗಳ ಜಲಸಂಪನೂಲ ಇಲಾಖೆಯ ಉನ್ನತ ಅಧಿಕಾರಿಗಳ ಸಭೆ ಜರುಗಿತು. ರಾಜ್ಯದ ಪರವಾಗಿ ಕಾವೇರಿ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಮಹೇಶ, ಜಲಸಂಪನೂಲ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳಾದ ಗೌರವ್ ಗುಪ್ತ, ಬಿಶ್ವನಾಥ್ ಸಿನ್ಹಾ, ತಮಿಳುನಾಡು ಪರವಾಗಿ ನೀರಾವರಿ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ.ಸತ್ಯಪ್ರಭ ಸಾಹು, ಲೋಕೋಪಯೋಗಿ ಇಲಾಖೆಯ ಕಾರ್ಯದರ್ಶಿ ಡಾ.ಎ.ಮುತ್ತಮ, ಕೇಂದ್ರ ಜಲಶಕ್ತಿಯ ಜಂಟಿ ಆಯುಕ್ತರು, ತಮಿಳುನಾಡಿನ ತಿರುಚಿ ಪ್ರದೇಶದ ಮುಖ್ಯ ಅಭಿಯಂತರ ಡಾ.ಎಸ್.ಶಿವಶಂಕರ್, ಕೇರಳ ಸರ್ಕಾರದ ನೀರಾವರಿ ಇಲಾಖೆಯ ಮುಖ್ಯ ಅಭಿಯಂತರ ಪ್ರಿಯೇಶ್. ಆರ್, ಪುದುಚೇರಿ ಲೋಕೋಪಯೋಗಿ ಇಲಾಖೆಯ ಮುಖ್ಯ ಇಂಜಿನಿಯರ್ ಕೆ.ವೀರಸೆಲ್ವಂ , ಹವಾಮಾನ ಇಲಾಖೆಯ ವಿಜ್ಞಾನಿಗಳು, ಕೊಯಮತ್ತೂರಿನ ಕೇಂದ್ರ ಜಲ ಆಯೋಗದ ಮುಖ್ಯ ಅಭಿಯಂತರ ಆರ್.ತಂಗಮಣಿ, ತೋಟಗಾರಿಕೆ ಇಲಾಖೆ ಆಯುಕ್ತ ಪ್ರಭಾತ್‌ಕುಮಾರ್ ಮತ್ತಿತರರು ಭಾಗವಹಿಸಿದ್ದರು.



ರಾಜ್ಯದ ಪರವಾಗಿ ಮಾತನಾಡಿದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ, ಕರ್ನಾಟಕದಲ್ಲಿ ಈ ಬಾರಿ ಜುಲೈ ತಿಂಗಳ ಮಧ್ಯ ಭಾಗ ಸಮೀಪಿಸಿದ್ದರೂ ನಮಗೆ ವಾಡಿಕೆಯಂತೆ ಮಳೆ ಬಂದಿಲ್ಲ. ಕಾವೇರಿ ಜಲಾನಯನ ಪ್ರದೇಶಗಳ ವ್ಯಾಪ್ತಿಗೆ ಒಳಪಡುವ ಕೆಆರ್‌ಎಸ್, ಕಬಿನಿ, ಹಾರಂಗಿ ಮತ್ತು ಹೇಮಾವತಿ ಜಲಾಶಕ್ತಿ ಇಲಾಖೆಗಳಲ್ಲಿ ನೀರಿನ ಸಂಗ್ರಹ ಅತ್ಯಂತ ಕಡಿಮೆ ಪ್ರಮಾಣದಲ್ಲಿದೆ ಎಂದು ಸಭೆಗೆ ವಿವರಿಸಿದರು. ಒಂದು ವಾರದ ಹಿಂದೆ ಅಲ್ಪಪ್ರಮಾಣದ ಮಳೆಯಾದ ಪರಿಣಾಮ ಜಲಾಶಯಗಳಿಗೆ ಕೊಂಚಮಟ್ಟಿನ ನೀರು ಹರಿದುಬಂದಿದೆ. ಕಳೆದ ವರ್ಷಕ್ಕೆ ಹೋಲಿಸಿದರೆ ಇದು ಏನೇನೂ ಸಾಲದು. ಹೀಗಾಗಿ ಪ್ರಸ್ತುತ ಸಂದರ್ಭದಲ್ಲಿ ನಾವು ತಮಿಳುನಾಡಿಗೆ ನೀರು ಹರಿಸಲು ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿದರು.ಜಲಾಶಯಗಳಲ್ಲಿ ನೀರು ಸಂಗ್ರಹವಾಗಿದ್ದರೆ ನಾವು ತಮಿಳುನಾಡಿಗೆ ಬೇಡಿಕೆಗೂ ಮುನ್ನವೇ ನೀರು ಹರಿಸುತ್ತಿದ್ದೆವು. ಆದರೆ ನಮ ಜಲಾಶಯಗಳಲ್ಲೇ ನೀರು ಸಂಗ್ರಹವಾಗಿಲ್ಲ. ಬಹುತೇಕ ಕಡೆ ಡೆಡ್ ಸ್ಟೋರೇಜ್‌ಗೆ ತಲುಪಿದೆ. ಈ ಹಂತದಲ್ಲಿ ನಾವು ನೀರು ಹರಿಸುವುದಾದರೂ ಹೇಗೆ? ಎಂದು ಪ್ರಶ್ನೆ ಮಾಡಿದರು.ಈ ನಾಲ್ಕು ಜಲಾಶಯಗಳಲ್ಲಿ ನೀರನ್ನು ಕೃಷಿ ಚಟುವಟಿಕೆಗಳಿಗೆ ಬಳಸದೆ ಕುಡಿಯುವ ಉದ್ದೇಶಕ್ಕೆ ಮಾತ್ರ ಬಳಸಿಕೊಳ್ಳುತ್ತಿದ್ದೇವೆ. ರೈತರು ಕೃಷಿ ಚಟುವಟಿಕೆಗಳಿಗೆ ನೀರು ಹರಿಸಬೇಕೆಂದು ಮನವಿ ಮಾಡಿಕೊಂಡರೂ ಭವಿಷ್ಯದ ದೃಷ್ಟಿಯಿಂದ ನಾವು ಈವರೆಗೂ ನಾಲೆಗಳಿಗೆ ನೀರನ್ನು ಹರಿಸಿಲ್ಲ. ಮುಂದೆ ಮಳೆಯಾದರೆ ಸಂಕಷ್ಟ ಸೂತ್ರದ ಪ್ರಕಾರ ನೆರೆಯ ರಾಜ್ಯಕ್ಕೆ ನೀರು ಹರಿಸಲು ನಮ ಅಭ್ಯಂತರವಿಲ್ಲ ಎಂದು ಸ್ಪಷ್ಟಪಡಿಸಿದರು.

### ಜಲಾಶಯಗಳಲ್ಲಿ ನೀರಿನ ಮಟ್ಟ ಕಡಿಮೆ

ಮಳೆಯ ಕೊರತೆಯಿಂದಾಗಿ ಜಲಾಶಯಗಳಲ್ಲಿ ನೀರಿನ ಮಟ್ಟ ಕಡಿಮೆಯಾಗಿದೆ. ನಾವು ಕುಡಿಯುವ ನೀರಿಗೆ ಆದ್ಯತೆ ನೀಡಿದರೆ ತಮಿಳುನಾಡು ಕೃಷಿ ಚಟುವಟಿಕೆಗಳಿಗೆ ನೀರು ಹರಿಸಬೇಕೆಂಬ ಬೇಡಿಕೆ ಇಟ್ಟಿದೆ. ಇದು ಹೇಗೆ ಸಾಧ್ಯ ಎಂದು ಗೌರವ ಗುಪ್ತ ಪ್ರಶ್ನಿಸಿದರೆಂದು ತಿಳಿದುಬಂದಿದೆ. ಕರ್ನಾಟಕದ ವಾದವನ್ನು ಒಪ್ಪದ ತಮಿಳುನಾಡು ಅಧಿಕಾರಿಗಳು ಸಂಕಷ್ಟ ಸೂತ್ರದ ಪ್ರಕಾರ ನಮಗೆ ಈ ವರ್ಷದ ನೀರನ್ನು ಹರಿಸಲು ಸೂಕ್ತ ನಿರ್ದೇಶನ ನೀಡಬೇಕೆಂದು ಸಭೆಯಲ್ಲಿ ತಮ್ಮ ವಾದವನ್ನು ಮಂಡಿಸಿದರು. ಸಂಕಷ್ಟ ಸೂತ್ರದ ಪ್ರಕಾರ ಕರ್ನಾಟಕ ಹರಿಸಬೇಕಾದ ನೀರನ್ನು ಹರಿಸಿಲ್ಲ. ಹೀಗಾಗಿ ನೀರು ಬಿಡಲು ನಿರ್ದೇಶನ ನೀಡಿ ಎಂದು ಸಭೆಗೆ ಮನವರಿಕೆ ಮಾಡಿಕೊಡುವ ಪ್ರಯತ್ನ ಮಾಡಿದರು. ಅಂತಿಮವಾಗಿ ಎರಡು ಕಡೆ ವಾದ-ಪ್ರತಿವಾದವನ್ನು ಆಲಿಸಿದ ಪ್ರಾಧಿಕಾರದ ಅಧಿಕಾರಿಗಳು ಯಥಾಸ್ಥಿತಿ ಕಾಪಾಡಿಕೊಳ್ಳಲು ಕರ್ನಾಟಕ, ತಮಿಳುನಾಡು ಮತ್ತು ಪಾಂಡಿಚೇರಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

**ಈ ದಿನದ ದರ** ಪೆಟ್ರೋಲ್: 111.68₹/L ಡೀಸೆಲ್ : 99.56₹/L ಬಂಗಾರ: ₹ 14,357/Gram 24ct ₹13,160/Gram 22ct ಬೆಳ್ಳಿ: ₹235.00/Gram

## AI ಶಿಕ್ಷಣಕ್ಕೆ ಉತ್ತೇಜನ; 6ನೇ ತರಗತಿಯಿಂದ ಎಐ ಪಾಠ- CM ಡಿ ಕೆ ಶಿವಕುಮಾರ್

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಕರ್ನಾಟಕದಲ್ಲಿ ಕೃತಕ ಬುದ್ಧಿಮತ್ತೆ ಶಿಕ್ಷಣ ಮತ್ತು ನಾವೀನ್ಯತೆಗೆ ಮತ್ತಷ್ಟು ಉತ್ತೇಜನ ನೀಡುವ ಮಹತ್ವದ ಯೋಜನೆಗಳನ್ನು ರಾಜ್ಯ ಸರ್ಕಾರ ಘೋಷಿಸಿದೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, 6ನೇ ತರಗತಿಯಿಂದಲೇ ಎಐ ಶಿಕ್ಷಣವನ್ನು ಪರಿಚಯಿಸುವ ಜೊತೆಗೆ, ಬೆಂಗಳೂರಿನಲ್ಲಿ ದೇಶದ ಮೊದಲ ಸರ್ಕಾರಿ ನೇತೃತ್ವದ ಎಐ ವಿಶ್ವವಿದ್ಯಾಲಯವನ್ನು ಸ್ಥಾಪಿಸಲಾಗುವುದು ಎಂದು ತಿಳಿಸಿದ್ದಾರೆ. ಎಕ್ಸ್ ಸಾಮಾಜಿಕ ಜಾಲತಾಣದಲ್ಲಿ ಈ ಕುರಿತು ಮಾಹಿತಿ ಹಂಚಿಕೊಂಡಿರುವ ಡಿ.ಕೆ. ಶಿವಕುಮಾರ್, ಶಿಕ್ಷಣ, ಸಂಶೋಧನೆ ಹಾಗೂ ಡಿಜಿಟಲ್ ಮೂಲಸೌಕರ್ಯದಲ್ಲಿ ಹೂಡಿಕೆ ಮಾಡುವ ಮೂಲಕ ಎಐ-ನೇಟಿವ್ ಕರ್ನಾಟಕ ನಿರ್ಮಿಸುವತ್ತ ಸರ್ಕಾರ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದ್ದಾರೆ.

ಬೆಂಗಳೂರಿನಲ್ಲಿ ಸ್ಥಾಪನೆಯಾಗಲಿರುವ ಈ ಎಐ ವಿಶ್ವವಿದ್ಯಾಲಯವು ಕೃತಕ ಬುದ್ಧಿಮತ್ತೆ ಹಾಗೂ ಉದಯೋನ್ಮುಖ ತಂತ್ರಜ್ಞಾನ ಕ್ಷೇತ್ರಗಳಲ್ಲಿ ಪರಿಣತಿ ಹೊಂದಿದ ಮಾನವ ಸಂಪನ್ಮೂಲವನ್ನು ಬೆಳೆಸುವತ್ತ ಗಮನಹರಿಸಲಿದೆ. ಇದರ ಜೊತೆಗೆ, ಶಿಕ್ಷಣ ಸಂಸ್ಥೆಗಳು, ಸ್ಟಾರ್ಟ್ ಅಪ್‌ಗಳು ಹಾಗೂ ಕೈಗಾರಿಕೆಗಳ ನಡುವೆ ಸಂಶೋಧನೆ, ನಾವೀನ್ಯತೆ ಮತ್ತು ಸಹಯೋಗವನ್ನು ಉತ್ತೇಜಿಸಲು ವಿಶೇಷ ಎಐ ಹಬ್ ಸ್ಥಾಪಿಸುವ ಯೋಜನೆಯೂ ಸರ್ಕಾರ ಹೊಂದಿದೆ.

## ತಾಕತ್ತಿದ್ದರೆ ನನ್ನ ಮೊದಲ ಆರೋಪಿಯನ್ನಾಗಿ ಮಾಡಿ ಬಂಧಿಸಲಿ: ಎಚ್.ಡಿ ಕುಮಾರಸ್ವಾಮಿ ಸವಾಲು

• ಉದಯವಾಹಿನಿ, ಬೆಂಗಳೂರು

ಬಿಡದಿಯ ಮಂಡಲಹಳ್ಳಿ ಗ್ರಾಮದ ರೈತರ ಮೇಲೆ ಎಫ್‌ಐಆರ್ ದಾಖಲಿಸಿರುವ ಪೊಲೀಸರ ಕ್ರಮವನ್ನು ಖಂಡಿಸಿದ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ, ನಾಡಿದ್ದು ಆ ಗ್ರಾಮಕ್ಕೆ ನಾನು ಹೋಗುತ್ತೇನೆ. ತಾಕತ್ತಿದ್ದರೆ ನನ್ನ ವಿರುದ್ಧ ಎಫ್‌ಐಆರ್ ದಾಖಲಿಸಲಿ ಎಂದು ಸವಾಲು ಹಾಕಿದರು. ನವದೆಹಲಿಯಲ್ಲಿ ಮಾತನಾಡಿದ ಅವರು, ಸಂಬಂಧವಿಲ್ಲದವರು ಕೊಟ್ಟ ದೂರಿನ ಮೇರೆಗೆ ರೈತರ ಮೇಲೆ ವಿನಾಕಾರಣ ಎಫ್‌ಐಆರ್ ಹಾಕಿದ್ದಾರೆ. ಅಕ್ರಮವಾಗಿ ಜಮೀನಿಗೆ ಸರ್ವೆ ಮಾಡಲು ಬಂದಾಗ ರೈತರು ಸಹಜವಾಗಿ ಆಕ್ರೋಶ ವ್ಯಕ್ತಪಡಿಸಿದ್ದಾರೆ ಎಂದು ಹೇಳಿದರು.

ಸರ್ಕಾರದ ಚಿತಾವಣೆಯಿಂದಲೇ ಅಧಿಕಾರಿಗಳು ಸರ್ವೆಗೆ ಬಂದಿದ್ದಾರೆ.



ಉದಯವಾಹಿನಿ ಚಿತ್ರ

ಮುಖ್ಯಮಂತ್ರಿಗೆ ಇಷ್ಟೊಂದು ಹಟ ಏಕೆ ಎಂಬುದೇ ಅರ್ಥವಾಗುತ್ತಿಲ್ಲ. ರೈತರ ಮೇಲೆ ಎರಡು ಎಫ್‌ಐಆರ್‌ಗಳನ್ನು ಹಾಕಿದ್ದಾರೆ. ಅವರಿಗೆ ಧೈರ್ಯವಿದ್ದರೆ ನನ್ನ ವಿರುದ್ಧ ಪ್ರಕರಣ ಹಾಕಲಿ. ನಾನೇ ಚಿತಾವಣೆ ಮಾಡುತ್ತಿದ್ದೇನೆ ಎಂದು ಕೆಲವರು ಹೇಳುತ್ತಿದ್ದಾರೆ. ನನ್ನನ್ನೇ ಮೊದಲ ಆರೋಪಿಯನ್ನಾಗಿ ಮಾಡಿ ಎಂದರು. ಬಿಡದಿ ಟೌನ್‌ಶಿಪ್ ವಿವಾದ ತಾರಕಕ್ಕೇರುತ್ತಿದ್ದಂತೆ, ಪೊಲೀಸ್ ಇನ್ಸ್‌ಪೆಕ್ಟರ್ ರಮೇಶ್ ಮತ್ತು ರೈತರ ದಾಳಿಯಲ್ಲಿ ಜಖಂಗೊಂಡ ಇನ್ನೋವಾ ಕಾರು ಚಾಲಕ ಸಮೀರ್ ನೀಡಿದ ದೂರಿನ ಅನ್ವಯ 2 ಪ್ರತ್ಯೇಕ ಪ್ರಕರಣಗಳು ದಾಖಲಾಗಿವೆ. ಒಟ್ಟು 22ಕ್ಕೂ ಹೆಚ್ಚು ಸೆಕ್ಷನ್ ದಾಖಲಿಸಲಾಗಿದೆ. ಇವುಗಳಲ್ಲಿ ಪ್ರಮುಖವಾಗಿ ಬಿಎನ್‌ಎಸ್ ಸೆಕ್ಷನ್ 109(1) ಕೊಲೆ ಯತ್ನ, ಸೆಕ್ಷನ್ 118(1) ಅಪಾಯಕಾರಿ ಆಯುಧಗಳಿಂದ ತೀವ್ರ ಗಾಯಗೊಳಿಸುವುದು, ಸರ್ಕಾರಿ ನೌಕರನ ಕರ್ತವ್ಯಕ್ಕೆ ಅಡ್ಡಿ ಹಾಗೂ ಹಲ್ಲೆಯಂತಹ ಜಾಮೀನು ರಹಿತ ಅಪರಾಧದ ಸೆಕ್ಷನ್ ಸೇರಿಸಲಾಗಿದೆ. ಇನ್ನು, ಮಂಡಲಹಳ್ಳಿ ಗಲಾಟೆಗೆ ಸಂಬಂಧಿಸಿದಂತೆ ಎಫ್‌ಐಆರ್ ದಾಖಲಿಸಿಕೊಂಡಿರುವ ಪೊಲೀಸರು ಸದ್ಯ ಯಾವ ರೈತರನ್ನೂ ಬಂಧಿಸಿಲ್ಲ.

## ಆಗಸ್ಟ್ 1ರಂದು ಪಶ್ಚಿಮ ಆರೋಗ್ಯಧಿಕಾರಿ ಡಾ. ಮನೋರಂಜನ್ ಹೆಗ್ಡೆ ಬೀಳ್ಕೊಡುಗೆ ಮತ್ತು ಅಭಿನಂದನಾ ಕಾರ್ಯಕ್ರಮ



ಉದಯವಾಹಿನಿ ಚಿತ್ರ

**ಬೀಳ್ಕೊಡುಗೆ ಸಮಾರಂಭ ಪಾಲಿಕೆ ಕೇಂದ್ರ ಕಛೇರಿಯಲ್ಲಿ ಹಮ್ಮಿಕೊಳ್ಳಲಾಗಿದೆ**

**ಪಾಲಿಕೆಯಲ್ಲಿ ಸೇವೆ ಸಲ್ಲಿಸಿ, ಜುಲೈನಲ್ಲಿ ನಿವೃತ್ತಿ**

• ಉದಯವಾಹಿನಿ, ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರಾಧಿಕಾರ ಪಾಲಿಕೆಗಳ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘ (ನೊ.)ವತಿಯಿಂದ ದಕ್ಷ ಪ್ರಮಾಣಿಕ ಡಾ. ಮನೋರಂಜನ್ ಹೆಗ್ಡೆ ಆರೋಗ್ಯಾಧಿಕಾರಿ (ಪಶ್ಚಿಮ)ರವರ 66 ಬೀಳ್ಕೊಡುಗೆ ಸಮಾರಂಭ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಪಾಲಿಕೆಯ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ದಿನಾಂಕ 01-08-2026ರಂದು ಶನಿವಾರ ಸಂಜೆ 6-00ಗಂಟೆಗೆ ದಕ್ಷ ಪ್ರಮಾಣಿಕ ಅಜಾತಶತ್ರು, ಡಾ.ಮನೋರಂಜನ್ ಹೆಗ್ಡೆ ಆರೋಗ್ಯಾಧಿಕಾರಿ (ಪಶ್ಚಿಮ)ರವರ ಬೀಳ್ಕೊಡುಗೆ ಸಮಾರಂಭ ಕಾರ್ಯಕ್ರಮವನ್ನು ಜಿ.ಬಿ.ಎ. ಕೇಂದ್ರ ಕಛೇರಿ ಆವರಣದಲ್ಲಿರುವ ನೌಕರರ ಭವನದ ಮುಂಭಾಗದಲ್ಲಿ ಹಮ್ಮಿಕೊಳ್ಳಲಾಗಿದೆ.

ಡಾ.ಮನೋರಂಜನ್ ಹೆಗ್ಡೆರವರು ವೈದ್ಯಕೀಯ ಕ್ಷೇತ್ರದಲ್ಲಿ ಪಾಲಿಕೆ ಅಪಾರ ಸೇವೆ ಮಾಡಿದ್ದಾರೆ. ದಶಕಗಳ ಕಾಲ ಪಾಲಿಕೆಯಲ್ಲಿ ಉತ್ತಮ ದಕ್ಷ, ಪ್ರಾಮಾಣಿಕ ಆರೋಗ್ಯಧಿಕಾರಿ ಎಂಬ ಕೀರ್ತಿಗಳಿಸಿದ್ದಾರೆ. ನಗುಮುಖದ ವೈದ್ಯ ಎಂಬ ಕೀರ್ತಿಗಳಿಸಿದ್ದಾರೆ. ಅಧಿಕಾರಿ, ಸಿಬ್ಬಂದಿಗಳು ಯಾರೇ ಬರಲಿ ಅವರ ಕಷ್ಟ, ಸಮಸ್ಯೆ ಹೇಳಿ ತತಕ್ಷಣ ಪರಿಹಾರ ಒದಗಿಸುತ್ತಿದ್ದರು. ಕೆಲಸದಲ್ಲಿ ನಿಷ್ಠೆ, ಮಾತಿನಲ್ಲಿ ತಾಳ್ಮೆ, ಕೆಲಸದಲ್ಲಿ ಕಾಯಕಯೋಗಿಯಂತೆ ಪಾಲಿಕೆಯಲ್ಲಿ ಸೇವೆ ಸಲ್ಲಿಸಿ, ಜುಲೈನಲ್ಲಿ ನಿವೃತ್ತಿಯಾಗಲಿದ್ದಾರೆ. ಬೀಳ್ಕೊಡುಗೆ ಸಮಾರಂಭವನ್ನು ಪಾಲಿಕೆ ಕೇಂದ್ರ ಕಛೇರಿಯಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಸಂಘದವರು ಮಾಧ್ಯಮದವರಿಗೆ ಮಾಹಿತಿ ನೀಡಿದರು.

# ಕಾಲ್ತುಳಿತ ಐಪಿಎಸ್ ಅಧಿಕಾರಿಗಳಿಗೆ ಕ್ಲೀನ್ ಚಿಟ್: ಆರ್ ಅಶೋಕ

## ಸರ್ಕಾರ ನಡೆಸುವ ಯಾವುದೇ ತನಿಖೆಯು ಪ್ರಕರಣವನ್ನು ಮುಚ್ಚಿಹಾಕುವ ಪ್ರಯತ್ನ ಎಂದು ನಾವು ಹೇಳಿದ್ದೆವು.

• ಉದಯವಾಹಿನಿ, ಬೆಂಗಳೂರು

**1** ದೃಶ್ಯಗಳನ್ನು ಬಿಜೆಪಿ ಉಲ್ಲೇಖಿಸಿದೆ.

**2** ಒಂದೇ ದಿನ ಎರಡು ಸ್ಥಳಗಳಲ್ಲಿ ಆಚರಣೆಗೆ ಅನುಮತಿ

**3** ತೆಕ್ಕಣ್ಣವರ್ ಅವರಿಗೆ ಎಚ್ಚರಿಕೆ

ರಾಯಲ್ ಚಾಲೆಂಜರ್ಸ್ ಬೆಂಗಳೂರು ವಿಜಯೋತ್ಸವದ ವೇಳೆ ಬೆಂಗಳೂರಿನ ಎಂ ಚಿನ್ನಸ್ವಾಮಿ ಕ್ರೀಡಾಂಗಣದ ಹೊರಗೆ ಸಂಭವಿಸಿದ ಕಾಲ್ತುಳಿತಕ್ಕೆ ಸಂಬಂಧಿಸಿದಂತೆ ಮೂವರು ಐಪಿಎಲ್ ಅಧಿಕಾರಿಗಳಿಗೆ ಕ್ಲೀನ್ ಚಿಟ್ ನೀಡುವ ಕಾಂಗ್ರೆಸ್ ಸರ್ಕಾರದ ನಿರ್ಧಾರವನ್ನು ವಿರೋಧ ಪಕ್ಷದ ನಾಯಕ ಆರ್ ಅಶೋಕ್ ಬುಧವಾರ ಟೀಕಿಸಿದ್ದಾರೆ.

ಆರ್‌ಸಿಬಿ ಟ್ರೋಫಿ ಗೆದ್ದ ಅಂಗವಾಗಿ ನಡೆದ ವಿಜಯೋತ್ಸವದ ಸಂದರ್ಭದಲ್ಲಿ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದ ಹೊರಗೆ ಜೂನ್ 4, 2025 ರಂದು ಸಂಭವಿಸಿದ ಕಾಲ್ತುಳಿತವು ಸರ್ಕಾರ ಪ್ರಾಯೋಜಿತ ಅವ್ಯವಸ್ಥೆಯ ಪರಿಣಾಮ ಎಂದು ಆರೋಪಿಸಿದ ಅಶೋಕ, ಇದೀಗ ಈ ದುರಂತದಲ್ಲಿ 11 ಮಂದಿಯ ಸಾವಿಗೆ ಯಾರನ್ನು ಹೊಣೆಗಾರರನ್ನಾಗಿ ಮಾಡಲಾಗುತ್ತದೆ ಎಂದು ಪ್ರಶ್ನಿಸಿದ್ದಾರೆ.

ಒಂದೇ ದಿನ ಎರಡು ಸ್ಥಳಗಳಲ್ಲಿ ಆಚರಣೆಗೆ ಅಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅನುಮತಿ ನೀಡಿದ್ದರು. ಪೊಲೀಸರ ಎಚ್ಚರಿಕೆಗಳ ಹೊರತಾಗಿಯೂ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಡಿಪಿಎಆರ್) ಕಾರ್ಯದರ್ಶಿ ಸತ್ಯವತಿ ಅವರು ವಿಧಾನಸೌಧದ ಮುಂದೆ ಕಾರ್ಯಕ್ರಮವನ್ನು ಮುಂದುವರಿಸಲು ಆದೇಶ ಹೊರಡಿಸಿದ್ದಾರೆ ಎಂದು ಬಿಜೆಪಿ ಆರೋಪಿಸಿದೆ. ಹೇಳಿಕೆಯಲ್ಲಿ ಆಗಿನ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರ ಹೆಸರನ್ನೂ ಉಲ್ಲೇಖಿಸಿ, ಕಾರ್ಯಕ್ರಮದ ಸಮಯದಲ್ಲಿ ಅವರು ಆಡಳಿತವನ್ನು ನೋಡಿಕೊಳ್ಳುತ್ತಿದ್ದರು ಎಂದು ಆರೋಪಿಸಲಾಗಿದೆ. ಆಚರಣೆಯ ಸಮಯದಲ್ಲಿ ಆಗಿನ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ರಾಯಲ್ ಚಾಲೆಂಜರ್ಸ್ ಬೆಂಗಳೂರು (ಆರ್‌ಸಿಬಿ) ಧ್ವಜಗಳನ್ನು ಹಿಡಿದಿದ್ದ ದೃಶ್ಯಗಳನ್ನು ಬಿಜೆಪಿ ಉಲ್ಲೇಖಿಸಿದೆ.

ದುರಂತದ ಬಳಿಕ ಅಮಾನತುಗೊಂಡಿದ್ದ ಐಪಿಎಸ್ ಅಧಿಕಾರಿಗಳಾದ ಬಿ. ದಯಾನಂದ್, ವಿಕಾಸ್ ಕುಮಾರ್ ವಿಕಾಸ್, ಶೇಖರ್ ಎಚ್ ತೆಕ್ಕಣ್ಣವರ್ ವಿರುದ್ಧದ ಇಲಾಖಾ ವಿಚಾರಣೆಗಳನ್ನು ಮುಕ್ತಾಯಗೊಳಿಸಿ ಕರ್ನಾಟಕ ಸರ್ಕಾರವು ಮಂಗಳವಾರ ಆದೇಶ ಹೊರಡಿಸಿದೆ.

ದೋಷಮುಕ್ತರಾದವರಲ್ಲಿ ಬೆಂಗಳೂರಿನ ಮಾಜಿ ಪೊಲೀಸ್ ಆಯುಕ್ತ ಬಿ. ದಯಾನಂದ್, ಪೊಲೀಸ್ ಮಹಾನಿರೀಕ್ಷಕ (ವಿಕಾಸ್ ಕುಮಾರ್ ವಿಕಾಸ್ ಮತ್ತು ಪೊಲೀಸ್ ಉಪ ಆಯುಕ್ತ ಶೇಖರ್ ತೆಕ್ಕಣ್ಣವರ್ ಸೇರಿದ್ದಾರೆ. ಭವಿಷ್ಯದಲ್ಲಿ ಜವಾಬ್ದಾರಿಯುತವಾಗಿ ವರ್ತಿಸುವಂತೆ ಸರ್ಕಾರವು ತೆಕ್ಕಣ್ಣವರ್ ಅವರಿಗೆ ಎಚ್ಚರಿಕೆ ನೀಡಿದೆ.

ಈ ವಿಷಯದ ಕುರಿತು ವಿಧಾನಸಭೆಯಲ್ಲಿ ನಡೆದ ಚರ್ಚೆಯ



ಉದಯವಾಹಿನಿ ಚಿತ್ರ

ಸಂದರ್ಭದಲ್ಲಿಯೇ, ಸರ್ಕಾರ ನಡೆಸುವ ಯಾವುದೇ ತನಿಖೆಯು ಪ್ರಕರಣವನ್ನು ಮುಚ್ಚಿಹಾಕುವ ಪ್ರಯತ್ನ ಎಂದು ನಾವು ಹೇಳಿದ್ದೆವು. ಅಲ್ಲದೆ, 'ಸಂತ್ರಸ್ತರ ಕುಟುಂಬಗಳಿಗೆ ನ್ಯಾಯ ಒದಗಿಸುವ ಯಾವುದೇ ಉದ್ದೇಶ ಕಾಂಗ್ರೆಸ್ ಸರ್ಕಾರಕ್ಕಿಲ್ಲ. ಅಧಿಕಾರದ ಮದದಲ್ಲಿ ಅಮಾಯಕರ ರಕ್ತ ಚೆಲ್ಲಿದವರು, ಆ ತಾಯಂದಿರ ಕಣ್ಣೀರಿನ ಶಾಪದಿಂದ ತಪ್ಪಿಸಿಕೊಳ್ಳಲಾರರು. ಅಧಿಕಾರ ಶಾಶ್ವತವಲ್ಲ. ಜನರು ಏನನ್ನೂ ಮರೆತಿಲ್ಲ. ಈ 'ಹಂತಕ ಕಾಂಗ್ರೆಸ್ ಸರ್ಕಾರ'ಕ್ಕೆ ಜನರು ಖಂಡಿತವಾಗಿಯೂ ತಕ್ಕ ಪಾಠ ಕಲಿಸಲಿದ್ದಾರೆ' ಎಂದು ಆ ಹೇಳಿಕೆ ತಿಳಿಸಿದೆ.

> ಸರ್ಕಾರದ ನಿರ್ಧಾರದ ನಂತರ, ಮುಖ್ಯಮಂತ್ರಿ, ಉಪಮುಖ್ಯಮಂತ್ರಿ, ಮುಖ್ಯ ಕಾರ್ಯದರ್ಶಿ, ಡಿಪಿಎಆರ್ ಕಾರ್ಯದರ್ಶಿ ಮತ್ತು ಪೊಲೀಸ್ ಅಧಿಕಾರಿಗಳನ್ನು 'ತಪ್ಪಿತಸ್ಥರಲ್ಲ' ಎಂದು ಘೋಷಿಸಲಾಗಿದೆ. ಹಾಗಾದರೆ ಆ 11 ಅಮಾಯಕರ ದುರಂತ ಸಾವಿಗೆ ಯಾರು ಹೊಣೆ? ಅವರು ಬಂದು ತಾವಾಗಿಯೇ ಸತ್ತರೇ ಎಂದು ಪ್ರಶ್ನಿಸಿದೆ. -ವಿರೋಧ ಪಕ್ಷ

> ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಭೀಕರ ಕಾಲ್ತುಳಿತಕ್ಕೆ ನಿಜವಾಗಿಯೂ ಯಾರು ಹೊಣೆ ಈ ಸರ್ಕಾರಿ ಪ್ರಾಯೋಜಿತ ಘಟನೆಯ 11 ಅಮಾಯಕ ಬಲಿಪಶುಗಳಿಗೆ ನ್ಯಾಯ ಎಲ್ಲಿದೆ' ಎಂದು ಹೇಳಿಕೆಯಲ್ಲಿ ಪ್ರಶ್ನಿಸಿದ್ದಾರೆ.-ಆರ್ ಅಶೋಕ

**ಕರ್ನಾಟಕ ಸರ್ಕಾರ ಪ್ರತಿಪಾದಿಸಿದೆ.**

ಅಧಿಕಾರಿಗಳ ಸಮರ್ಥನಾ ಹೇಳಿಕೆಗಳು ಮತ್ತು ಆಡಳಿತಾತ್ಮಕ ವಿಭಾಗದ ಅಭಿಪ್ರಾಯವನ್ನು ಪರಿಶೀಲಿಸಿದ ನಂತರವೇ ಇಲಾಖಾ ವಿಚಾರಣೆಗಳನ್ನು ಮುಕ್ತಾಯಗೊಳಿಸುವ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಕರ್ನಾಟಕ ಸರ್ಕಾರ ಪ್ರತಿಪಾದಿಸಿದೆ.

## ಭಾರತ್ ಜೋಡೊ ಹೆಸರಲ್ಲಿ ಕಾಂಗ್ರೆಸ್ ಕಾರ್ಯಕರ್ತರಿಗೆ ಗಂಜಿ ಕೇಂದ್ರ

ಭಾರತ್ ಜೋಡೊ ಯುವ ಸಂಘಗಳ ಹೆಸರಿನಲ್ಲಿ ಕಾಂಗ್ರೆಸ್ ಪಕ್ಷ ತನ್ನ ಕಾರ್ಯಕರ್ತರಿಗೆ ಗಂಜಿ ಕೇಂದ್ರಗಳನ್ನು ನಿರ್ಮಿಸಲು ಮುಂದಾಗಿದೆ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ ಆರೋಪಿಸಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ರೈತರು ವೃದ್ಧರು, ಅನಾಥರು, ವಿಧವೆಯರು ಹಾಗೂ ಇತರೆ ಫಲಾನುಭವಿಗಳಿಗೆ ಪಿಂಚಣಿ ನೀಡದೆ ತಡೆ ಹಿಡಿದಿರುವ ರಾಜ್ಯ ಸರ್ಕಾರ, ಕಾಂಗ್ರೆಸ್ ಕಾರ್ಯಕರ್ತರಿಗೆ ತೆರಿಗೆದಾರರ ಹಣದಲ್ಲಿ ಪುನರ್ವಸತಿ ಕಲ್ಪಿಸುತ್ತಿದೆ' ಎಂದು ದೂರಿದರು. 'ಗೃಹಲಕ್ಷ್ಮಿಯ 5,000 ಕೋಟಿ, ಅನ್ನಭಾಗ್ಯದ 750 ಕೋಟಿ ಫಲಾನುಭವಿಗಳಿಗೆ ನೀಡಿಲ್ಲ. ಗ್ಯಾರಂಟಿ ಅನುಷ್ಠಾನ ಸಮಿತಿಯ ಅಧ್ಯಕ್ಷ ಎಚ್.ಎಂ.ರೇವಣ್ಣ ಅವರಿಗೆ 58 ಲಕ್ಷ ವಸತಿ ಭತ್ಯೆ ನೀಡಲಾಗಿದೆ. ವೇತನ, ಸೌಲಭ್ಯಗಳ ಜತೆಗೆ 12 ಸಿಬ್ಬಂದಿ ಇದ್ದಾರೆ. ಎಲ್ಲಾ ಸೇರಿ 2 ಕೋಟಿ ವೆಚ್ಚವಾಗುತ್ತಿದೆ. ವಿರೋಧ ಪಕ್ಷದ ನಾಯಕನಾದ ನನಗೆ ಇನ್ನೂ ಸರ್ಕಾರಿ ವಸತಿಗೃಹ ನೀಡಿಲ್ಲ. ಗ್ಯಾರಂಟಿ ಸಮಿತಿಯ ಉಪಾಧ್ಯಕ್ಷರಿಗೆ ಸರ್ಕಾರಿ ವಸತಿ ಗೃಹ ನೀಡಲಾಗಿದೆ. ಜಿಲ್ಲಾ, ತಾಲ್ಲೂಕು ಸಮಿತಿ ಅಧ್ಯಕ್ಷರಿಗೆ ಪ್ರತಿ ತಿಂಗಳು ಸಂಬಳ, ಸದಸ್ಯರಿಗೆ ಭತ್ಯೆ ನೀಡಲಾಗುತ್ತಿದೆ. ಕಚೇರಿ ವೆಚ್ಚ ಸೇರಿದರೆ ಪ್ರತಿ ತಿಂಗಳು 150 ಕೋಟಿ ವ್ಯಯಿಸಲಾಗುತ್ತಿದೆ' ಎಂದು ಟೀಕಿಸಿದರು.

ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ಕಾಂಗ್ರೆಸ್ ವತಿಯಿಂದ ಹಮ್ಮಿಕೊಂಡಿದ್ದ ಭಾರತ್ ಜೋಡೊ ಹೆಸರಲ್ಲಿ ಸಂಘಗಳನ್ನು ರಚಿಸಿ, ಪಕ್ಷದ ನಿರುದ್ಯೋಗಿ ಕಾರ್ಯಕರ್ತರಿಗೆ ಉದ್ಯೋಗ ನೀಡಲಾಗುತ್ತಿದೆ. ಪ್ರತಿ ಸಮಿತಿಯ ತರಬೇತುದಾರರಿಗೆ 24,000 ವೇತನ ನಿಗದಿ ಮಾಡಲಾಗುತ್ತಿದೆ. ಈ ಯೋಜನೆಗೆ 1,010 ಕೋಟಿ ವೆಚ್ಚ ಮಾಡಲಾಗುತ್ತಿದೆ. ಇದು ತೆರಿಗೆದಾರರ ಬೆವರಿನ ಹಣದ ದುರ್ಬಳಕೆ' ಎಂದು ಟೀಕಿಸಿದರು. ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿದ ಅವರು 'ರೈತರು, ವೃದ್ಧರು, ಅನಾಥರು, ವಿಧವೆಯರು ಹಾಗೂ ಇತರೆ ಫಲಾನುಭವಿಗಳಿಗೆ ಪಿಂಚಣಿ ನೀಡದೆ ತಡೆ ಹಿಡಿದಿರುವ ರಾಜ್ಯ ಸರ್ಕಾರ, ಕಾಂಗ್ರೆಸ್ ಕಾರ್ಯಕರ್ತರಿಗೆ ತೆರಿಗೆದಾರರ ಹಣದಲ್ಲಿ ಪುನರ್ವಸತಿ ಕಲ್ಪಿಸುತ್ತಿದೆ' ಎಂದು ದೂರಿದರು.

ಗೃಹಲಕ್ಷ್ಮಿಯ 5,000 ಕೋಟಿ, ಅನ್ನಭಾಗ್ಯದ 750 ಕೋಟಿ ಫಲಾನುಭವಿಗಳಿಗೆ ನೀಡಿಲ್ಲ. ಗ್ಯಾರಂಟಿ ಅನುಷ್ಠಾನ ಸಮಿತಿಯ ಅಧ್ಯಕ್ಷ ಎಚ್.ಎಂ.ರೇವಣ್ಣ ಅವರಿಗೆ 58 ಲಕ್ಷ ವಸತಿ ಭತ್ಯೆ ನೀಡಲಾಗಿದೆ. ವೇತನ, ಸೌಲಭ್ಯಗಳ ಜತೆಗೆ 12 ಸಿಬ್ಬಂದಿ ಇದ್ದಾರೆ. ಎಲ್ಲಾ ಸೇರಿ 2 ಕೋಟಿ ವೆಚ್ಚವಾಗುತ್ತಿದೆ.

ವಿರೋಧ ಪಕ್ಷದ ನಾಯಕನಾದ ನನಗೆ ಇನ್ನೂ ಸರ್ಕಾರಿ ವಸತಿಗೃಹ ನೀಡಿಲ್ಲ. ಗ್ಯಾರಂಟಿ ಸಮಿತಿಯ ಉಪಾಧ್ಯಕ್ಷರಿಗೆ ಸರ್ಕಾರಿ ವಸತಿ ಗೃಹ ನೀಡಲಾಗಿದೆ. ಜಿಲ್ಲಾ, ತಾಲ್ಲೂಕು ಸಮಿತಿ ಅಧ್ಯಕ್ಷರಿಗೆ ಪ್ರತಿ ತಿಂಗಳು ಸಂಬಳ, ಸದಸ್ಯರಿಗೆ ಭತ್ಯೆ ನೀಡಲಾಗುತ್ತಿದೆ. ಕಚೇರಿ ವೆಚ್ಚ ಸೇರಿದರೆ ಪ್ರತಿ ತಿಂಗಳು 150 ಕೋಟಿ ವ್ಯಯಿಸಲಾಗುತ್ತಿದೆ' ಎಂದು ಟೀಕಿಸಿದರು.

## ಲೋಕ ಅದಾಲತ್ ಮೆಗಾ ದಾಖಲೆ: ಶೇ.50 ಟ್ರಾಫಿಕ್ ದಂಡದ ರಿಯಾಯತಿಯ 19 ಲಕ್ಷ ಕೇಸ್ ಕ್ಲೋಸ್!



• ಉದಯವಾಹಿನಿ, ಬೆಂಗಳೂರು

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ವಿಶೇಷ ಪ್ರಯತ್ನದ ಫಲವಾಗಿ, ರಾಜ್ಯ ಸರ್ಕಾರವು ಸಂಚಾರ ನಿಯಮ ಉಲ್ಲಂಘನೆಯ ಬಾಕಿ ದಂಡದ ಪಾವತಿಗೆ ಘೋಷಿಸಿದ್ದ ಶೇಕಡಾ 50 ರಷ್ಟು ರಿಯಾಯಿತಿ ಯೋಜನೆಗೆ ಸಾರ್ವಜನಿಕರಿಂದ ಅಭೂತಪೂರ್ವ ಸ್ಪಂದನೆ ಸಿಕ್ಕಿದೆ.

ಈ ರಿಯಾಯಿತಿ ಯೋಜನೆಯಡಿ ಒಟ್ಟು 19,13,659 ಸಂಚಾರ ಚಲನ್ ಪ್ರಕರಣಗಳು ಇತ್ಯರ್ಥಗೊಂಡಿದ್ದು, ಸರ್ಕಾರದ ಬೊಕ್ಕಸಕ್ಕೆ ಬರೋಬ್ಬರಿ 55 ಕೋಟಿ ರೂಪಾಯಿ ದಂಡದ ಆದಾಯ ಹರಿದುಬಂದಿದೆ.

ಜುಲೈ 11 ರಂದು ರಾಜ್ಯಾದ್ಯಂತ ನಡೆದ ಲೋಕ ಅದಾಲತ್‌ನಲ್ಲಿ ಒಟ್ಟು 78.79 ಲಕ್ಷ ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಗಿದ್ದು, ಇದರಲ್ಲಿ 2.54 ಲಕ್ಷ ಬಾಕಿ ಇದ್ದ ಪ್ರಕರಣಗಳು ಹಾಗೂ 76.25 ಲಕ್ಷ ಪೂರ್ವ ವ್ಯಾಜ್ಯ ಪ್ರಕರಣಗಳು ಸೇರಿವೆ. ಇಡೀ ಪ್ರಕ್ರಿಯೆಯಲ್ಲಿ ಒಟ್ಟು 3,017 ಕೋಟಿ ರೂಪಾಯಿಗಳಷ್ಟು ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ.

ಜೂನ್ 21 ರಿಂದ ಜುಲೈ 10 ರವರೆಗೆ 20 ದಿನಗಳವರೆಗೆ ಸಂಚಾರ ಚಲನ್‌ಗೆ ರಿಯಾಯಿತಿಯನ್ನು ನೀಡಲಾಯಿತು. ಲೋಕ ಅದಾಲತ್‌ನಲ್ಲಿ ಇತ್ಯರ್ಥವಾದ ಪ್ರಕರಣಗಳ ಅಂಕಿಅಂಶಗಳ ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡಿದ ಹೈಕೋರ್ಟ್‌ನ ಹಿರಿಯ ನ್ಯಾಯಾಧೀಶೆ ಮತ್ತು ಕೆಎಸ್‌ಎಲ್‌ಎಸ್‌ಎ ಕಾರ್ಯನಿರ್ವಾಹಕ ಅಧ್ಯಕ್ಷೆ ಅನು ಶಿವರಾಮನ್, ಸಾರಿಗೆ ಇಲಾಖೆಗೆ ಸಂಬಂಧಿಸಿದ 1,212 ಪ್ರಕರಣಗಳನ್ನು ವಿಲೇವಾರಿ ಮಾಡುವ ಮೂಲಕ 61.99 ಲಕ್ಷ ರೂ.ಗಳನ್ನು ವಸೂಲಿ ಮಾಡಲಾಗಿದೆ.

## ನಾಡಗೀತೆಗೆ ಬೌದ್ಧ ಪದ ಸೇರ್ಪಡೆಗೆ ಶಿಫಾರಸು: ಪಾರಸಿಕ ಜೈನರುದ್ಯಾನ ಬದಲಿಗೆ ಬೌದ್ಧರುದ್ಯಾನ?

• ಉದಯವಾಹಿನಿ, ಬೆಂಗಳೂರು

ಕವಿ ಕುವೆಂಪು ವಿರಚಿತ ನಾಡಗೀತೆಯಲ್ಲಿ ಬೌದ್ಧ ಪದ ಮರು ಸೇರ್ಪಡೆಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪುರುಷೋತ್ತಮ ಬಿಳಿಮಲೆ ಅವರ ನೇತೃತ್ವದ ಸಮಿತಿ ರಾಜ್ಯ ಸರ್ಕಾರಕ್ಕೆ ಶಿಫಾರಸು ಮಾಡಿದೆ. ನಾಡಗೀತೆಯಲ್ಲಿ ಇರುವ 'ಪಾರಸಿಕ ಜೈನರುದ್ಯಾನ' ಎಂಬ ಸಾಲನ್ನು ಪರಿಷ್ಕರಿಸಿ 'ಬೌದ್ಧ' ಪದವನ್ನೂ ಒಳಗೊಂಡಂತೆ 'ಪಾರಸಿಕ ಜೈನ ಬೌದ್ಧರುದ್ಯಾನ' ಎಂದು ಮಾರ್ಪಾಡು ಮಾಡಲು ಸಮಿತಿಯು ರಾಜ್ಯ ಸರ್ಕಾರಕ್ಕೆ ಸರ್ವಾನುಮತದಿಂದ ಶಿಫಾರಸು ಮಾಡಿದೆ. ರಾಷ್ಟ್ರಕವಿ ಕುವೆಂಪು ಅವರು 1924ರಲ್ಲಿ ಬರೆದಿದ್ದ ನಾಡಗೀತೆಯ ಮೊದಲ ಕರಡು ಪ್ರತಿಯಲ್ಲಿ 'ಬೌದ್ಧರುದ್ಯಾನ' ಎಂಬ ಪದವಿತ್ತು. ಆದರೆ, 1930ರಲ್ಲಿ ಅವರ 'ಕೊಳಲು' ಕವನ ಸಂಕಲನದಲ್ಲಿ ಈ ಹಾಡು ಪ್ರಕಟವಾದಾಗ ಅದು 'ಜೈನರುದ್ಯಾನ' ಎಂದಾಗಿತ್ತು. ಬೌದ್ಧ ಧರ್ಮಕ್ಕೆ ಇರುವ ಐತಿಹಾಸಿಕ ಮಹತ್ವವನ್ನು ಪರಿಗಣಿಸಿ, ನಾಡಗೀತೆಯಲ್ಲಿ ಮತ್ತೆ ಬೌದ್ಧ ಪದವನ್ನು ಸೇರಿಸಬೇಕು ಎಂದು ಕೋರಿ ಮಾಜಿ ಸಚಿವ



ಉದಯವಾಹಿನಿ ಚಿತ್ರ

ಎಚ್.ಸಿ. ಮಹದೇವಪ್ಪ ಅವರು 2025ರ ನವೆಂಬರ್‌ನಲ್ಲಿ ಅಂದಿನ ಸಿಎಂ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದರು. ಈ ಪತ್ರದ ಹಿನ್ನೆಲೆಯಲ್ಲಿ ಅಂದಿನ ಸಿಎಂರ ಸೂಚನೆಯಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು 8 ಸದಸ್ಯರ ಸಮಿತಿಯೊಂದನ್ನು ರಚಿಸಿತ್ತು.

## ಮತದಾರರ ಪಟ್ಟಿ ಪರಿಷ್ಕರಣೆ: ಅರ್ಜಿ ಭರ್ತಿ ಸಹಾಯಕ್ಕಾಗಿ ಮತದಾರರ ನೆರವು ಕೇಂದ್ರಗಳತ್ತ ಜನಸಾಗರ..!

• ಉದಯವಾಹಿನಿ, ಬೆಂಗಳೂರು

ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಪ್ರಕ್ರಿಯೆ ಹಿನ್ನೆಲೆಯಲ್ಲಿ ಗಣತಿ ನಮೂನೆ ಸಲ್ಲಿಕೆಗೆ ಇನ್ನೂ 15 ದಿನಗಳ ಕಾಲಾವಕಾಶ ಉಳಿದಿದ್ದರೂ, ರಾಜ್ಯದಾದ್ಯಂತ ಮತದಾರರ ನೆರವು ಕೇಂದ್ರಗಳಲ್ಲಿ ಜನಸಂದಣಿ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. 2002ರ ಮತದಾರರ ಪಟ್ಟಿಯ ವಿವರಗಳನ್ನು ಹುಡುಕುವುದು, ಅರ್ಜಿ ಭರ್ತಿ ಮಾಡುವುದು ಹಾಗೂ ನಮೂನೆಗಳನ್ನು ಸರಿಯಾಗಿ ಸಲ್ಲಿಸಲು ಸಹಾಯ ಪಡೆಯಲು ನಾಗರಿಕರು ಗಂಟೆಗಟ್ಟಲೆ ಸಾಲಿನಲ್ಲಿ ನಿಲ್ಲುತ್ತಿದ್ದಾರೆ.

ಬಹುತೇಕ ಪ್ರದೇಶಗಳಲ್ಲಿ ಮತಗಟ್ಟೆ ಮಟ್ಟದ ಅಧಿಕಾರಿಗಳು ಸಮರ್ಪಕ ಸಹಕಾರ ನೀಡುತ್ತಿಲ್ಲ ಎಂಬ ಆರೋಪ ಕೇಳಿಬಂದಿದೆ. ಅಗತ್ಯ ಮಾಹಿತಿ ನೀಡುತ್ತಿಲ್ಲ ಅಥವಾ ಸಮಯದ ಕೊರತೆ ಇದೆ ಎಂದು ಸಾರ್ವಜನಿಕರು ದೂರಿದ್ದಾರೆ.

ಹೆಗ್ಗನಹಳ್ಳಿಯ ವೃದ್ಧ ಮಹಿಳೆ ಗೌರಮ್ಮ ಎಂಬುವವರು ಮಾತನಾಡಿ, ನಾನು ಕರ್ನಾಟಕದಲ್ಲೇ ವಾಸಿಸುತ್ತಿದ್ದರೂ ನಮೂನೆ ಹೇಗೆ ಭರ್ತಿ ಮಾಡಬೇಕು ಎಂಬುದು ಗೊತ್ತಾಗಲಿಲ್ಲ. ಸಹಾಯಕ್ಕಾಗಿ ಬಿಎಲ್‌ಒ ಅವರನ್ನು ಸಂಪರ್ಕಿಸಿದರೂ ನೆರವು ಸಿಗಲಿಲ್ಲ. ಬಳಿಕ ನಮ್ಮ ವಾರ್ಡ್ ಕಚೇರಿಯಲ್ಲಿರುವ ಮತದಾರರ ನೆರವು ಕೇಂದ್ರಕ್ಕೆ ಹೋಗಬೇಕಾಯಿತು. ಅಲ್ಲಿ ಕೂಡ ಬಹಳ ಹೊತ್ತು ಕಾಯಬೇಕಾಯಿತು ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

ಹಲವರು ತಮ್ಮ ಹಳೆಯ ಮತದಾರರ ವಿವರಗಳಿಗಾಗಿ ನೆರವು ಕೇಂದ್ರಗಳ ಮೊರೆ ಹೋಗುತ್ತಿದ್ದಾರೆ. ಬೆಂಗಳೂರು



ಉದಯವಾಹಿನಿ ಚಿತ್ರ

ಗ್ರಾಮಾಂತರ ಜಿಲ್ಲೆಯ ಮತದಾರರೊಬ್ಬರು (ಹೆಸರು ಬದಲಿಸಲಾಗಿದೆ) ಮಾತನಾಡಿ, ಹೆಸರು ಅಳಿಸುವುದಿಲ್ಲ ಎಂದು ಹೇಳಿದರೂ ನೋಟಿಸ್ ಬರುವ ಭಯವಿದೆ. 2002ರಲ್ಲಿ ನಾನು ಯಾವ ಮತಗಟ್ಟೆಯಲ್ಲಿ ಮತದಾರನಾಗಿದ್ದೆ ಎಂಬುದನ್ನು ಹುಡುಕಲು ಕೆಲಸಕ್ಕೆ ರಜೆ ತೆಗೆದುಕೊಳ್ಳಬೇಕಾಯಿತು. ಮಧ್ಯೆ ಹಲವು ಬಾರಿ ಮನೆ ಬದಲಿಸಿದ್ದರಿಂದ ಸಾಕಷ್ಟು ಕಷ್ಟಪಟ್ಟು ಕೊನೆಗೆ ವಿವರ ಸಿಕ್ಕಿತು ಎಂದರು.

> ಮತ್ತೊಬ್ಬ ವೃದ್ಧ ಸಿದ್ದರಾಜಯ್ಯ ಎಂಬುವವರು ಮಾತನಾಡಿ, 2002ರ ಮತದಾರರ ಪಟ್ಟಿಯ ವಿವರಗಳನ್ನು ಹುಡುಕುವುದು ತುಂಬಾ ಗೊಂದಲದ ಕೆಲಸವಾಗಿದೆ. ಸಣ್ಣ ತಪ್ಪಿನಿಂದಲೂ ಹೆಸರು ಅಳಿಸಿಹಾಕಬಹುದು ಎಂಬ ಆತಂಕದಿಂದ ನೆರವು ಕೇಂದ್ರಕ್ಕೆ ಹೋಗಿ ಮಾಹಿತಿ ಪಡೆದೆ ಎಂದು ಹೇಳಿದ್ದಾರೆ.

## ತರಗತಿಯಿಂದ ಹೊರಹೋಗುವಂತೆ ಶಿಕ್ಷಕರಿಂದ ನಿಂದನೆ; 7ನೇ ತರಗತಿ ವಿದ್ಯಾರ್ಥಿ ಆತ್ಮಹತ್ಯೆ ಯತ್ನ!

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಶಾಲೆಯಲ್ಲಿ ನಡೆದ ಸಣ್ಣ ಘಟನೆಯೊಂದಕ್ಕೆ ಸಂಬಂಧಿಸಿದಂತೆ ಶಿಕ್ಷಕರೊಬ್ಬರು ಶಿಕ್ಷೆ ವಿಧಿಸಿದ ನಂತರ 7ನೇ ತರಗತಿಯ ವಿದ್ಯಾರ್ಥಿಯೊಬ್ಬ ಆತ್ಮಹತ್ಯೆಗೆ ಯತ್ನಿಸಿದ್ದಾನೆ ಎಂದು ಪೊಲೀಸರು ಬುಧವಾರ ತಿಳಿಸಿದ್ದಾರೆ. ಈ ಘಟನೆ ಮಂಗಳವಾರ ನಡೆದಿದ್ದು, ಆತ ಈ ನಿರ್ಧಾರ ತೆಗೆದುಕೊಳ್ಳುವ ಮುನ್ನ ತನ್ನ ಸಹೋದರಿಗೆ ಈ ವಿಷಯ ತಿಳಿಸಿದ್ದನು.

ವಿದ್ಯಾರ್ಥಿ ಇಲ್ಲಿನ ಮರಿಯಪ್ಪನಪಾಳ್ಯ ಪ್ರದೇಶದಲ್ಲಿರುವ ಶಾಲೆಯೊಂದರಲ್ಲಿ ವ್ಯಾಸಂಗ ಮಾಡುತ್ತಿದ್ದಾನೆ ಎಂದು ಅವರು ಹೇಳಿದರು. ಆತ ನೇಣು ಹಾಕಿಕೊಂಡು ಆತ್ಮಹತ್ಯೆಗೆ ಯತ್ನಿಸಿದ್ದು, ತಕ್ಷಣವೇ ಆತನನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಅಲ್ಲಿ ಆತ ಚಿಕಿತ್ಸೆ ಪಡೆಯುತ್ತಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಪ್ರಾಥಮಿಕ ತನಿಖೆಯ ಪ್ರಕಾರ, ಮತ್ತೊಬ್ಬ ವಿದ್ಯಾರ್ಥಿಯೊಂದಿಗೆ ಅನುಚಿತವಾಗಿ ವರ್ತಿಸಿದ ಆರೋಪದ ಹಿನ್ನೆಲೆಯಲ್ಲಿ ಶಿಕ್ಷಕರು ಆ ಬಾಲಕನನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.

## ಅಕ್ರಮಕ್ಕೆ ನೆರವು ಆರೋಪದ ಮೇಲೆ ಅಮಾನತು: ಹೈಕೋರ್ಟ್ ಮೆಟ್ಟಿಲೇರಿದ KPSC ಅಧ್ಯಕ್ಷ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಲೋಕಸೇವಾ ಆಯೋಗದ ಅಧ್ಯಕ್ಷ ಸ್ಥಾನದಿಂದ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅಮಾನತುಗೊಳಿಸಿರುವ ಕ್ರಮವನ್ನು ಪ್ರಶ್ನಿಸಿ ಕೆಪಿಎಸ್‌ಸಿ ಅಧ್ಯಕ್ಷ ಶಿವಶಂಕರಪ್ಪ ಎಸ್. ಸಾಹುಕಾರ್ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ. ಅಮಾನತಿಗೆ ಕಾರಣವಾಗಿರುವುದು ಅವರ ಪುತ್ರಿಯ ಆದಾಯ ಪ್ರಮಾಣಪತ್ರಕ್ಕೆ ಸಂಬಂಧಿಸಿದ ವಿವಾದವಾಗಿದೆ. ಅಮಾನತು ಆದೇಶ ಹೊರಬಿದ್ದ ತಕ್ಷಣವೇ ಸಾಹುಕಾರ್ ಹೈಕೋರ್ಟ್ ಮೊರೆ ಹೋಗಿದ್ದಾರೆ. ನ್ಯಾಯಮೂರ್ತಿ ಸೂರಜ್ ಗೋವಿಂದರಾಜ್ ಅವರು ನಿನ್ನೆ ಅರ್ಜಿಯ ವಿಚಾರಣೆಯನ್ನು ಕೆಲಕಾಲ ನಡೆಸಿದರು. ಅರ್ಜಿದಾರರ ಪರ ಹಿರಿಯ ವಕೀಲ ಅರುಣ್ ಶ್ಯಾಮ್ ವಾದ ಮಂಡಿಸಿ, ಭಾರತ ಸಂವಿಧಾನದ 317ನೇ ವಿಧಿಯ ಪ್ರಕಾರ ರಾಷ್ಟ್ರಪತಿಗಳು ಸುಪ್ರೀಂ ಕೋರ್ಟ್ ಮೂಲಕ ವಿಚಾರಣೆ ಆರಂಭಿಸುವ ಮುನ್ನವೇ ರಾಜ್ಯಪಾಲರು ಅಮಾನತು ಕ್ರಮ ಕೈಗೊಂಡಿರುವುದು ಕಾನೂನುಬದ್ಧವಲ್ಲ ಎಂದು ವಾದಿಸಿದರು. ಇದಕ್ಕೆ ಪ್ರತಿಯಾಗಿ ರಾಜ್ಯಪಾಲರ ಪರ ಹಾಜರಾದ ಹಿರಿಯ ವಕೀಲ ಉದಯ ಹೊಳ್ಳ, ಅರ್ಜಿದಾರರ ವಿರುದ್ಧದ ಆರೋಪಗಳ ಗಂಭೀರತೆ ಮತ್ತು ವಿಶ್ವಾಸಾರ್ಹತೆಯನ್ನು ಪರಿಗಣಿಸಿ ಅಮಾನತು ಕ್ರಮ ಕೈಗೊಳ್ಳಲಾಗಿದೆ ಎಂದು ನ್ಯಾಯಾಲಯಕ್ಕೆ ತಿಳಿಸಿದರು.

## ಎರಡು ಪ್ರತ್ಯೇಕ ಸ್ಥಳಗಳ ಮೇಲೆ ಅರಣ್ಯ ಇಲಾಖೆ ದಾಳಿ; ಸ್ಫೋಟಕ ವಸ್ತುಗಳು ವಶಕ್ಕೆ, ಇಬ್ಬರು ಆರೋಪಿಗಳ ಬಂಧನ..

• ಉದಯವಾಹಿನಿ, ಬೆಂಗಳೂರು

ಸಿಲಿಕಾನ್ ಸಿಟಿಯಲ್ಲಿ ಅರಣ್ಯ ಇಲಾಖೆ ಅಧಿಕಾರಿಗಳು ಭರ್ಜರಿ ಕಾರ್ಯಾಚರಣೆ ನಡೆಸಿದ್ದು, ಎರಡು ಪ್ರತ್ಯೇಕ ಕಡೆಗಳಲ್ಲಿ ದಾಳಿ ನಡೆಸಿ ಭಾರಿ ಪ್ರಮಾಣದ ಸ್ಫೋಟಕ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರು ಆರೋಪಿಗಳನ್ನು ಬೆಂಗಳೂರು ದಕ್ಷಿಣ ವಿಭಾಗದ ಪೊಲೀಸರು ಬಂಧಿಸಿದ್ದಾರೆ. ವಿಶ್ವಾಸಾರ್ಹ ಮಾಹಿತಿ ಮೇರೆಗೆ ಕೋಡಿಹಳ್ಳಿ ಹಾಗೂ ಕನಕಪುರ ಸರ್ಕಲ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ದಾಳಿಗಳು ನಡೆದಿವೆ.

ಬಂಧಿತರ ವಿರುದ್ಧ ಸ್ಫೋಟಕ ಕಾಯ್ದೆಯಡಿ ಪ್ರತ್ಯೇಕ ಮೊಕದ್ದಮೆಗಳನ್ನು ದಾಖಲಿಸಲಾಗಿದೆ. ಮೊದಲ ದಾಳಿಯಲ್ಲಿ ಉಪ ವಲಯ ಅರಣ್ಯಾಧಿಕಾರಿ ಎಂ. ಮಂಜುನಾಥ್ ನೀಡಿದ ದೂರಿನ ಮೇರೆಗೆ ಆರ್ ರುದ್ರೇಶ್ ಎಂಬುವವರಿಗೆ ಸೇರಿದ ವಾಣಿಜ್ಯ ಮಳಿಗೆಯ ಮೇಲೆ ಅಧಿಕಾರಿಗಳು ದಾಳಿ ನಡೆಸಿದ್ದರು. ಈ ವೇಳೆ ಸುಮಾರು 2.35 ಕೆಜಿ ತೂಕದ ಸ್ಫೋಟಕ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ.


# ಮುಂಗಾರು ಇಳಿಮುಖವಾಗುತ್ತಿದ್ದಂತೆ ರಾಜ್ಯದ ಹಲವೆಡೆ ತಾಪಮಾನ ಹೆಚ್ಚಳ!

## ಹಲವೆಡೆ ತಾಪಮಾನ ಬೆಂಗಳೂರು ನಗರದಲ್ಲಿ ಉಷ್ಣಾಂಶದಲ್ಲಿ ಏರಿಕೆ ಕಂಡುಬಂದಿದೆ

• ಉದಯವಾಹಿನಿ, ಬೆಂಗಳೂರು

ಮುಂಗಾರು ಮಳೆ ಕಡಿಮೆಯಾದ ಬೆನ್ನಲ್ಲೇ ರಾಜ್ಯದಲ್ಲಿ ತಾಪಮಾನ ಏರಿಕೆಯಾಗಿದೆ. ಭಾರತೀಯ ಹವಾಮಾನ ಇಲಾಖೆಯ ಮಾಹಿತಿ ಪ್ರಕಾರ ರಾಜ್ಯದ ಹಲವೆಡೆ ಸತತ ಎರಡು ದಿನ ಹೆಚ್ಚಿನ ಉಷ್ಣಾಂಶ ದಾಖಲಾಗಿದೆ. ಬೆಂಗಳೂರು ನಗರದಲ್ಲಿ ಮಂಗಳವಾರ ಉಷ್ಣಾಂಶದಲ್ಲಿ ಏರಿಕೆ ಕಂಡುಬಂದಿದೆ. ಎಚ್‌ಎಎಲ್ ವಿಮಾನ ನಿಲ್ದಾಣದ ಪ್ರದೇಶದಲ್ಲಿ ಮಂಗಳವಾರ 33 ಡಿಗ್ರಿ ಸೆಲ್ಸಿಯಸ್, ಕೆಂಪೇಗೌಡ ವಿಮಾನ ನಿಲ್ದಾಣ ಪ್ರದೇಶದಲ್ಲಿ 33 ಡಿಗ್ರಿ, ಹಾಗೂ ನಗರದ ಇತರೆಡೆ 32.4 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲಾಗಿದೆ.

2021ರಲ್ಲಿ 32.7 ಉಷ್ಣಾಂಶ ದಾಖಲಾಗಿರುವುದು ಹೊರತುಪಡಿಸಿದರೆ ಬೆಂಗಳೂರು ನಗರದಲ್ಲಿ 2016ರಿಂದ ಈಚೆಗೆ ಜುಲೈ ತಿಂಗಳಿನಲ್ಲಿ 33 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ ದಾಖಲಾಗಿಲ್ಲ. 2016ರ ಜುಲೈ 15ರಂದು 30.5 ಡಿಗ್ರಿ ಸೆಲ್ಸಿಯಸ್, 2017ರ ಜುಲೈ 29ರಂದು 31.3 ಡಿಗ್ರಿ ಸೆಲ್ಸಿಯಸ್, 2018ರ ಜುಲೈ 3ರಂದು 30.2 ಡಿಗ್ರಿ ಸೆಲ್ಸಿಯಸ್, 2019ರ ಜುಲೈ 13ರಂದು 31.2 ಡಿಗ್ರಿ ಸೆಲ್ಸಿಯಸ್, 2020ರ ಜುಲೈ 23ರಂದು 31 ಡಿಗ್ರಿ ಸೆಲ್ಸಿಯಸ್, 2021ರ ಜುಲೈ 21ರಂದು 32.7 ಡಿಗ್ರಿ ಸೆಲ್ಸಿಯಸ್, 2022ರ ಜುಲೈ 21ರಂದು 30.8 ಡಿಗ್ರಿ ಸೆಲ್ಸಿಯಸ್, 2023ರ ಜುಲೈ 2ರಂದು 30.8 ಡಿಗ್ರಿ ಸೆಲ್ಸಿಯಸ್, 2024ರ ಜುಲೈ 13ರಂದು 31 ಡಿಗ್ರಿ ಸೆಲ್ಸಿಯಸ್ ಹಾಗೂ 2025ರ ಜುಲೈ 12ರಂದು 30 ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿತ್ತು



ಉದಯವಾಹಿನಿ ಚಿತ್ರ

ಎಂದು ಭಾರತೀಯ ಹವಾಮಾನ ಇಲಾಖೆಯ ಬೆಂಗಳೂರಿನ ಪ್ರಾದೇಶಿಕ ಕೇಂದ್ರ ತಿಳಿಸಿದೆ. ಬೆಂಗಳೂರು ಮಾತ್ರವಲ್ಲದೇ ರಾಜ್ಯದ ಹಲವೆಡೆ ತಾಪಮಾನ ಏರಿಕೆಯಾಗಿದೆ. ಬೀದರ್ (37.6 ಡಿಗ್ರಿ ಸೆಲ್ಸಿಯಸ್), ಕಲಬುರಗಿ (38.3 ಡಿಗ್ರಿ ಸೆಲ್ಸಿಯಸ್), ರಾಯಚೂರು (38.4 ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದೆ. ಹೊನ್ನಾವರದಲ್ಲಿ 31.7 ಡಿಗ್ರಿ ಸೆಲ್ಸಿಯಸ್, ಕಾರವಾರದಲ್ಲಿ 33.2, ಮಂಗಳೂರು ವಿಮಾನ ನಿಲ್ದಾಣದಲ್ಲಿ 30.3 ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದೆ.

ದಕ್ಷಿಣ ಮತ್ತು ಕರಾವಳಿಯ ಕೆಲವು ಭಾಗದಲ್ಲಿ ಶಾಖ ಮತ್ತು ಆರ್ದ್ರತೆ ಮುಂದುವರೆಯಲಿದೆ. ಆಂಧ್ರ ಪ್ರದೇಶದ ಕರಾವಳಿ, ತಮಿಳುನಾಡು ಮತ್ತು ಒಡಿಶಾದ ಭಾಗದಲ್ಲಿ ಬಿಸಿಲು ಮತ್ತು ಆರ್ದ್ರತೆಯ ಪರಿಸ್ಥಿತಿಯು ಮುಂದಿನ 3 ರಿಂದ 4 ದಿನಗಳ ಕಾಲ ಮುಂದುವರೆಯಲಿದೆ. ಈ ನಡುವೆ ಮುಂದಿನ ಮೂರು ದಿನಗಳ ಕಾಲ ಆಂಧ್ರ ಪ್ರದೇಶದಲ್ಲಿ ಶಾಖದ ಅಲೆ ಪರಿಸ್ಥಿತಿ ಎದುರಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಉತ್ತರ ಮತ್ತು ಪೂರ್ವ ಪಟ್ಟಿಗಳು ತೀವ್ರವಾದ ಮಾನ್ಸೂನ್ ಮಳೆಗೆ ಸಿದ್ಧವಾಗುತ್ತಿದ್ದರೆ, ಆಗ್ನೇಯ ಕರಾವಳಿಯು ಶಾಖ ಮತ್ತು ತೇವಾಂಶದಿಂದ ಬಳಲುತ್ತಿದೆ. ಹವಾಮಾನ ಮಾದರಿಗಳಲ್ಲಿ ಗಮನಾರ್ಹ ಪ್ರಾದೇಶಿಕ ವಿಭಜನೆ ಇರುವುದನ್ನು ಐಎಂಡಿಯ ಮುನ್ಸೂಚನೆ ಸೂಚಿಸುತ್ತಿದೆ.

### ಕೆಲ ಜಿಲ್ಲೆಗಳಿಗೆ ಮಳೆಯ ಎಚ್ಚರಿಕೆ

ಕರಾವಳಿ ಭಾಗದ ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರ ಕನ್ನಡ ಮತ್ತು ದಕ್ಷಿಣ ಒಳನಾಡಿನ ಕೊಡಗು, ಹಾಸನ ಜಿಲ್ಲೆಗಳ ಒಂದೆರಡು ಕಡೆ ಮುಂದಿನ 24 ಗಂಟೆಗಳಲ್ಲಿ 30= 40 ಕಿ.ಮೀ. ವೇಗದ ಗಾಳಿಯೊಂದಿಗೆ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಬಳ್ಳಾರಿ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ಕೋಲಾರ, ಮಂಡ್ಯ, ಮೈಸೂರು, ರಾಮನಗರ, ತುಮಕೂರು ಹಾಗೂ ವಿಜಯನಗರ ಜಿಲ್ಲೆಗಳ ಒಂದೆರಡು ಕಡೆ ಬಲವಾದ ಗಾಳಿ ಬೀಸುವ ಸಾಧ್ಯತೆ ಬಗ್ಗೆಯೂ ಎಚ್ಚರಿಸಿದೆ.

# ಉದಯ ವಾಹಿನಿ ಮಹಾಸ್ಫೋಟದ ಎಫೆಕ್ಟ್: ಕೆಂಭಾವಿ ಖಾಸಗಿ ಶಾಲೆಗಳಿಗೆ BEO ದಿಢೀರ್ ದಾಳಿ!

## 'ನಾಮಕೇ ವಾಸ್ತೆ' ಭೇಟಿ ಕೊಟ್ಟು ಕೈತೊಳೆದುಕೊಂಡರೆ ಬಿಡಲ್ಲ; ಅಕ್ರಮ ಹಾಸ್ಟೆಲ್‌ಗಳಿಗೆ ಬೀಗ ಜಡಿಯದಿದ್ದರೆ ಶಿಕ್ಷಣ ಇಲಾಖೆಯೇ ಹೊಣೆ!

- ಇಲಿಯಾಸ್ ಪಟೇಲ್ ಬಳಗಾನೂರ ರಾಜ್ಯ ವಿಶೇಷ ವರದಿಗಾರರು

- ಉದಯವಾಹಿನಿ,ಯಾದಗಿರಿ :



ಉದಯವಾಹಿನಿ ಚಿತ್ರ



ಕೆಂಭಾವಿ ಪಟ್ಟಣದ ಪ್ರತಿಷ್ಠಿತ ಖಾಸಗಿ ಶಿಕ್ಷಣ ಸಂಸ್ಥೆಗಳ ಕತ್ತಲೆ ಕೋಣೆಯಲ್ಲಿ ರಾಜಾರೋಷವಾಗಿ ನಡೆಯುತ್ತಿದ್ದ ಅಕ್ರಮ ವಸತಿ ನಿಲಯಗಳು (ಹಾಸ್ಟೆಲ್‌ಗಳು) ಹಾಗೂ ಪೋಷಕರ ರಕ್ತ

1. ಬ್ರಿಲಿಯಂಟ್ ಹಿರಿಯ ಪ್ರಾಥಮಿಕ ಶಾಲೆ
2. ಹೋಲಿಫೇತ್ ಪ್ರಾಥಮಿಕ ಮತ್ತು ಪ್ರೌಢಶಾಲೆ
3. ವಿದ್ಯಾಲಕ್ಷ್ಮಿ ಪ್ರಾಥಮಿಕ ಮತ್ತು ಪ್ರೌಢಶಾಲೆ
4. ಶ್ರೀ ಸಾಯಿ ಪ್ರಾಥಮಿಕ ಮತ್ತು ಪ್ರೌಢಶಾಲೆ
5. ವಿದ್ಯಾವಿಕಾಸ ಕಿರಿಯ ಪ್ರಾಥಮಿಕ ಶಾಲೆ

ಹೀರಲಾಗುತ್ತಿದ್ದ ಶುಲ್ಕದ ದಂಧೆಯ ವಿರುದ್ಧ 'ಉದಯ ವಾಹಿನಿ' ನಡೆಸಿದ ಸರಣಿ ಮಹಾಸ್ಫೋಟ ವರದಿ ಕೊನೆಗೂ ಅಧಿಕಾರಿಗಳ ನಿದ್ದೆ ಗೆಡಿಸಿದೆ. ವರದಿಯ ತೀವ್ರತೆಗೆ ಬೆಚ್ಚಿಬಿದ್ದ ಶಿಕ್ಷಣ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಅಧಿಕಾರಿಗಳ ದಂಡು ಕೆಂಭಾವಿಯ ಶಾಲೆಗಳಿಗೆ ದಿಢೀರ್ ಭೇಟಿ ನೀಡಿ ಕಟ್ಟುನಿಟ್ಟಿನ ತನಿಖೆ ಕೈಗೊಂಡಿದೆ. ಆದರೆ, ಸಾರ್ವಜನಿಕರ ಮತ್ತು ಪೋಷಕರ ಸದ್ಯದ ನೇರ ಪ್ರಶ್ನೆ ಒಂದೇ ಈ ಭೇಟಿ ಕೇವಲ ನಾಮಕಾವಸ್ತೆ ನಾಟಕವೋ. ಅಥವಾ ಅಕ್ರಮದ ಅಡ್ಡೆಗಳಿಗೆ ಬೀಗ ಜಡಿಯುವ ನಿಜವಾದ ಖಡಕ್ ಕ್ರಮವೋ.

**ಅಧಿಕಾರಿಗಳ ಕಣ್ಣೆದುರೇ ಬಯಲಾಯ್ತು ನರಕಸದೃಶ ಸತ್ಯ!**

ಉದಯ ವಾಹಿನಿ ತನ್ನ ತನಿಖಾ ವರದಿಯಲ್ಲಿ ಎತ್ತಿ ತೋರಿಸಿದ್ದ ಪ್ರತಿಯೊಂದು ಅಂಶವೂ ಅಧಿಕಾರಿಗಳ ಭೇಟಿಯ ವೇಳೆ ಅಕ್ಷರಶಃ ಸತ್ಯ ಎಂಬುದು ಸಾಬೀತಾಗಿದೆ.

ಪಟ್ಟಣದ ಪ್ರಮುಖ ಶಾಲೆಗಳಾದ:
ಬ್ರಿಲಿಯಂಟ್ ಹಿರಿಯ ಪ್ರಾಥಮಿಕ ಶಾಲೆ
ಹೋಲಿಫೇತ್ ಪ್ರಾಥಮಿಕ ಮತ್ತು ಪ್ರೌಢಶಾಲೆ
ವಿದ್ಯಾಲಕ್ಷ್ಮಿ ಪ್ರಾಥಮಿಕ ಮತ್ತು ಪ್ರೌಢಶಾಲೆ
ಶ್ರೀ ಸಾಯಿ ಪ್ರಾಥಮಿಕ ಮತ್ತು ಪ್ರೌಢಶಾಲೆ
ವಿದ್ಯಾವಿಕಾಸ ಕಿರಿಯ ಪ್ರಾಥಮಿಕ ಶಾಲೆ
ಈ ಸಂಸ್ಥೆಗಳ ಅಡಿಯಲ್ಲಿ ನಡೆಯುತ್ತಿರುವ ಹಾಸ್ಟೆಲ್‌ಗಳಿಗೆ ಅಧಿಕಾರಿಗಳು ಕಾಲಿಟ್ಟಾಗ ಅಲ್ಲಿ ಕಂಡುಬಂದ ದೃಶ್ಯಗಳು ದಿಗಿಲು ಹುಟ್ಟಿಸುವಂತಿದ್ದವು. ಕಮರ್ಷಿಯಲ್ ಕಾಂಪ್ಲೆಕ್ಸ್‌ಗಳಲ್ಲಿ, ಯಾವುದೇ ಗಾಳಿ-ಬೆಳಕಿಲ್ಲದ ಒಂದೇ ಸಣ್ಣ ಕೋಣೆಯಲ್ಲಿ ಹತ್ತಾರು ಮಕ್ಕಳನ್ನು ಕುರಿಗಳಂತೆ ತುಂಬಿದಂತೆ ಕೂಡಿಡಲಾಗಿದೆ! ಕನಿಷ್ಠ ಅಗ್ನಿಶಾಮಕ ದಳದ ಅನುಮತಿಯೂ ಇಲ್ಲದೆ ಮಕ್ಕಳ ಜೀವದ ಜೊತೆ ಚೆಲ್ಲಾಟವಾಡಲಾಗುತ್ತಿದೆ. ಕಳಪೆ ಊಟ, ಕಲುಷಿತ ನೀರು ನೀಡುತ್ತಾ ಮಕ್ಕಳ ಆರೋಗ್ಯದ ಜೊತೆ ಮಾಫಿಯಾ ಆಟವಾಡುತ್ತಿರುವುದು ಬೆಳಕಿಗೆ ಬಂದಿದೆ.

ಮಹಾಸ್ಫೋಟ ವರದಿ ಕೊನೆಗೂ ಅಧಿಕಾರಿಗಳ ನಿದ್ದೆ ಗೆಡಿಸಿದೆ

**'ಭೇಟಿ ಕೊಟ್ಟಿದ್ದು ಸರಿ... ಮುಂದಿನ ಆ್ಯಕ್ಷನ್ ಏನು?**

ಶುಲ್ಕದ ಹೆಸರಿನಲ್ಲಿ ಲೂಟಿ ಹೊಡೆಯುವ, ಸುರಕ್ಷತೆಯಿಲ್ಲದೆ ಮಕ್ಕಳ ಜೀವಕ್ಕೆ ಕುತ್ತು ತರುವ ಇಂತಹ ಶಿಕ್ಷಣ ಸಂಸ್ಥೆಗಳ ಪರವಾನಗಿಯನ್ನು ತಕ್ಷಣವೇ ರದ್ದುಗೊಳಿಸಬೇಕು.

ವರದಿಯ ಬೆನ್ನಲ್ಲೇ ಎಚ್ಚೆತ್ತಿರುವ ಅಧಿಕಾರಿಗಳು, ವರದಿಯನ್ನು ಗಂಭೀರವಾಗಿ ಪರಿಗಣಿಸಿದ್ದು, ಅಕ್ರಮ ಹಾಸ್ಟೆಲ್ ನಡೆಸುವ ಆಡಳಿತ ಮಂಡಳಿಗಳಿಗೆ ತಕ್ಷಣ ಕಾರಣ ಕೇಳಿ ನೋಟಿಸ್ ಜಾರಿ ಮಾಡಲಾಗುವುದು ಹಾಗೂ ಶಾಲಾ ಪರವಾನಗಿ ರದ್ದತಿಗೆ ಶಿಫಾರಸು ಮಾಡಲಾಗುವುದು ಎಂದು ಭರವಸೆ ನೀಡಿದ್ದಾರೆ.

ಆದರೆ, ಮಾದಿಗ ಯುವ ಸೇನೆಯ ಹೋಬಳಿ ಘಟಕದ ಅಧ್ಯಕ್ಷರಾದ ಮಲ್ಲಣ್ಣ ಎಂ. ವಠಾರ ಸೇರಿದಂತೆ ಹಲವು ಪ್ರಗತಿಪರ ಸಂಘಟನೆಗಳು ಇಲಾಖೆಗೆ ಖಡಕ್ ಎಚ್ಚರಿಕೆ ನೀಡಿವೆ. ಕೇವಲ ನೋಟಿಸ್ ನೀಡಿ ಕಾಲಹರಣ ಮಾಡಿದರೆ ಉಗ್ರ ಹೋರಾಟ ಗ್ಯಾರಂಟಿ. ಈ ಅಕ್ರಮದಲ್ಲಿ ಇಲಾಖೆಯ ಅಧಿಕಾರಿಗಳ ಶಾಮೀಲಾತಿ ಇದೆಯೇ ಎಂಬ ಅನುಮಾನ ಕಾಡುತ್ತಿದ್ದು, ತಕ್ಷಣವೇ ಈ ಹಾಸ್ಟೆಲ್‌ಗಳನ್ನು ಸೀಲ್ ಡೌನ್ ಮಾಡಬೇಕು ಎಂದು ಒತ್ತಾಯಿಸಿದ್ದಾರೆ.

**ಉದಯ ವಾಹಿನಿ ಆಕ್ರೋಶ: ಇಲಾಖೆಯ ಗಮನಕ್ಕೆ...**

ಪೋಷಕರು ತಮ್ಮ ರಕ್ತ ಬಸಿದು ತಂದುಕೊಡುವ ಹಣದಲ್ಲಿ ಖಾಸಗಿ ಶಾಲೆಗಳು ಕೋಟಿ ಕೋಟಿ ಲೂಟಿ ಹೊಡೆಯುತ್ತಿವೆ. ನಿಯಮಬಾಹಿರವಾಗಿ ಕರಾಳ ದಂಧೆ ನಡೆಸುತ್ತಿರುವ ಈ ಕಟುಕರಿಗೆ ಕೇವಲ ಭೇಟಿ ನೀಡಿ ಮಾತಿನ ಮೂಲಕ ತಿಳಿ ಹೇಳಿದರೆ ಸಾಲದು. ತುರ್ತು ಕ್ರಮವಾಗಿ ಆ ಅಕ್ರಮ ಹಾಸ್ಟೆಲ್‌ಗಳನ್ನು ಸೀಲ್ ಡೌನ್ ಮಾಡಲೇಬೇಕು.ಮಕ್ಕಳ ಜೀವಕ್ಕೆ ಅಪಾಯ ತಂದೊಡ್ಡಿದ ಮಾಲೀಕರ ಮೇಲೆ ಕ್ರಿಮಿನಲ್ ಮೊಕದ್ದಮೆ ದಾಖಲಾಗಬೇಕು.

ಒಂದು ವೇಳೆ ಅಧಿಕಾರಿಗಳು ರಾಜಕೀಯ ಒತ್ತಡಕ್ಕೆ ಮಣಿದು ಕಣ್ಣೊರೆಸುವ ತಂತ್ರ ಮಾಡಿದರೆ, ಮುಂದೆ ನಡೆಯುವ ಯಾವುದೇ ಅನಾಹುತಕ್ಕೂ ಶಿಕ್ಷಣ ಇಲಾಖೆಯೇ ನೇರ ಹೊಣೆಯಾಗಬೇಕಾಗುತ್ತದೆ! ಉದಯ ವಾಹಿನಿ ಈ ದಂಧೆಯ ಕೊನೆ ಮೊದನ್ನು ನೋಡುವವರೆಗೂ ತನ್ನ ಅಭಿಯಾನವನ್ನು ನಿಲ್ಲಿಸುವುದಿಲ್ಲ.

# 'ಸ್ವಚ್ಛತೆಗೆ ಸಾರ್ವಜನಿಕರ ಸಹಭಾಗಿತ್ವವೂ ಅಗತ್ಯ'

- ಉದಯವಾಹಿನಿ, ರಾಯಚೂರು:

'ನಗರದ ಸ್ವಚ್ಛತೆ ಮತ್ತು ಸುಂದರ ಪರಿಸರ ನಿರ್ಮಾಣದ ಉದ್ದೇಶದಿಂದ ಮಹಾನಗರ ಪಾಲಿಕೆ ಆಧುನಿಕ ರಸ್ತೆ ಕಸಗುಡಿಸುವ ಯಂತ್ರದ ಪ್ರಾಯೋಗಿಕ ಪ್ರದರ್ಶನ ನಡೆಸಿದ್ದು, ಶೀಘ್ರದಲ್ಲಿಯೇ ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಿ ಹೊಸ ಯಂತ್ರವನ್ನು ಖರೀದಿಸಲಾಗುವುದು' ಎಂದು ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮೊಹಾಪಾತ್ರ ಹೇಳಿದರು.

ನಗರದ ಲಿಂಗಸುಗೂರು ರಸ್ತೆಯಲ್ಲಿ ರಸ್ತೆ ಕಸಗುಡಿಸುವ ಯಂತ್ರದ ಪ್ರಾತ್ಯಕ್ಷಿಕೆಯನ್ನು ವೀಕ್ಷಿಸಿದ ಬಳಿಕ ಅವರು ಮಾತನಾಡಿ, ನಗರದ ಪ್ರಮುಖ ರಸ್ತೆಗಳು, ವಾಣಿಜ್ಯ ಪ್ರದೇಶಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಯಂತ್ರಗಳ ಮೂಲಕ ಸ್ವಚ್ಛತಾ ಕಾರ್ಯವನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಕೈಗೊಳ್ಳುವ ಉದ್ದೇಶ ಹೊಂದಲಾಗಿದೆ' ಎಂದರು.ನಗರದಲ್ಲಿ ಜನಸಂಖ್ಯೆ ಹಾಗೂ ವಾಹನಗಳ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ರಸ್ತೆಗಳಲ್ಲಿ ದೂಳು ಮತ್ತು ಕಸ ಸಂಗ್ರಹವಾಗುತ್ತಿರುವ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ' ಎಂದು ತಿಳಿಸಿದರು. 'ರಸ್ತೆಗಳಲ್ಲಿ ಸಂಗ್ರಹವಾಗಿರುವ ದೂಳು, ಪ್ಲಾಸ್ಟಿಕ್ ತ್ಯಾಜ್ಯ, ಒಣ ಎಲೆಗಳು ಸೇರಿದಂತೆ ವಿವಿಧ ರೀತಿಯ ಕಸವನ್ನು ಈ ಯಂತ್ರವು ವೇಗವಾಗಿ ಮತ್ತು ಸಮರ್ಪಕವಾಗಿ ತೆರವುಗೊಳಿಸುವ ಸಾಮರ್ಥ್ಯ ಹೊಂದಿದ್ದು, ನಗರ ಸ್ವಚ್ಛತೆ ಕಾಪಾಡಲು ಸಹಕಾರಿಯಾಗಲಿದೆ' ಎಂದು ವಿವರಿಸಿದರು.

'ಸ್ವಚ್ಛತೆ ಕೇವಲ ಮಹಾನಗರ ಪಾಲಿಕೆಯ ಜವಾಬ್ದಾರಿಯಲ್ಲ; ಸಾರ್ವಜನಿಕರ ಸಹಭಾಗಿತ್ವವೂ ಅಗತ್ಯವಾಗಿದೆ. ಸಾರ್ವಜನಿಕರು ರಸ್ತೆ ಬದಿಯಲ್ಲಿ ಅಥವಾ ಸಾರ್ವಜನಿಕ ಸ್ಥಳಗಳಲ್ಲಿ ಕಸ ಎಸೆಯದೇ, ನಿಗದಿತ ಕಸದ ಬುಟ್ಟಿಗಳಲ್ಲಿಯೇ ತ್ಯಾಜ್ಯವನ್ನು ಹಾಕಬೇಕು' ಎಂದು ಅವರು ಮನವಿ ಮಾಡಿದರು.

ಯಂತ್ರಗಳ ಬಳಕೆಯಿಂದ ಸ್ವಚ್ಛತಾ ಕಾರ್ಯ ವೇಗವಾಗಿ ನಡೆಯುವುದರ ಜೊತೆಗೆ ಮಾನವ ಶ್ರಮವೂ ಕಡಿಮೆಯಾಗುತ್ತದೆ. ರಸ್ತೆಗಳಲ್ಲಿ ದೂಳು ಹರಡುವುದನ್ನು ತಡೆದು ಪರಿಸರ ಮಾಲಿನ್ಯ ನಿಯಂತ್ರಣಕ್ಕೂ ಇದು ಸಹಕಾರಿಯಾಗಲಿದೆ' ಎಂದು ಹೇಳಿದರು.

# ಮುದ್ದೇಬಿಹಾಳ ಗ್ರಾಮೀಣ ಪೊಲೀಸ್ ಠಾಣೆ ಶೀಘ್ರ ಆರಂಭಕ್ಕೆ ಒತ್ತಾಯ

- ಉದಯವಾಹಿನಿ, ಮುದ್ದೇಬಿಹಾಳ:



ಉದಯವಾಹಿನಿ ಚಿತ್ರ

ಸರ್ಕಾರ ಮಂಜೂರು ಮಾಡಿರುವ ಮುದ್ದೇಬಿಹಾಳ ಗ್ರಾಮೀಣ ಪೊಲೀಸ್ ಠಾಣೆಯನ್ನು ಕೂಡಲೇ ಕಾರ್ಯಾರಂಭಗೊಳಿಸಬೇಕು ಮತ್ತು ಪಟ್ಟಣದ ಬಸವೇಶ್ವರ ವೃತ್ತದಲ್ಲಿನ ಟ್ರಾಫಿಕ್ ಸಮಸ್ಯೆಯನ್ನು ಬಗೆಹರಿಸಬೇಕೆಂದು ಜನಸೇವಾ ಸಂಸ್ಥೆಯ ಪದಾಧಿಕಾರಿಗಳು ಬೆಳಗಾವಿ ಐಜಿಪಿ ಸಂದೀಪ್ ಪಾಟೀಲ ಅವರಿಗೆ ಮನವಿ ಸಲ್ಲಿಸಿದರು.

ತಾಲ್ಲೂಕಿನ ಬಸರಕೋಡದ ಪವಾಡ ಬಸವೇಶ್ವರ ದೇವಸ್ಥಾನಕ್ಕೆ ಭೇಟಿ ನೀಡಿದ್ದ ಸಂದರ್ಭದಲ್ಲಿ ಐಜಿಪಿ ಅವರನ್ನು ಭೇಟಿಯಾದ ಸಂಸ್ಥೆಯ ಸದಸ್ಯರು, ಹಿಂದಿನ ಬಜೆಟ್‌ನಲ್ಲಿ ಮಂಜೂರಾದ ಗ್ರಾಮೀಣ ಪೊಲೀಸ್ ಠಾಣೆ ಈವರೆಗೂ ಆರಂಭವಾಗಿಲ್ಲದ ಬಗ್ಗೆ ಗಮನ ಸೆಳೆದರು. ಶಾಸಕ ಸಿ.ಎಸ್. ನಾಡಗೌಡರು ಠಾಣೆಗಾಗಿ ಸ್ಥಳ ನಿಗದಿಪಡಿಸಿದ್ದರೂ ವಿಳಂಬವಾಗುತ್ತಿರುವುದನ್ನು ವಿವರಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಐಜಿಪಿ ಸಂದೀಪ್ ಪಾಟೀಲ, ಈ ವಿಚಾರ ಸರ್ಕಾರದ ಮಟ್ಟದಲ್ಲಿದ್ದು, ಸಂಬಂಧಿಸಿದವರೊಂದಿಗೆ ಚರ್ಚಿಸುವುದಾಗಿ ಭರವಸೆ ನೀಡಿದರು.

ಅಲ್ಲದೆ, ಬಸವೇಶ್ವರ ವೃತ್ತದಲ್ಲಿನ ಟ್ರಾಫಿಕ್ ಸಮಸ್ಯೆ ಕುರಿತಾದ ದೂರಿಗೆ ಸ್ಪಂದಿಸಿ, ಸ್ಥಳೀಯ ಪೊಲೀಸರಿಗೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಸೂಚಿಸುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ವಿಜಯಪುರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ, ಡಿವೈಎಸ್ಪಿ ಚಂದ್ರಕಾಂತ ನಂದರೆಡ್ಡಿ, ಸಿಪಿಐ ಮೊಹ್ಮದ ಫಸಿವುದ್ದೀನ್, ಜನಸೇವಾ ಸಂಸ್ಥೆಯ ಅಧ್ಯಕ್ಷ ಶಂಕರ ಇ. ಹೆಬ್ಬಾಳ, ಪ್ರಧಾನ ಕಾರ್ಯದರ್ಶಿ ಜಿ.ವಾಯ್. ದಫೇದಾರ, ಖಜಾಂಚಿ ಹಣಮಂತ ನಲವಡೆ, ಪತ್ರಕರ್ತ ಅನಿಲ್ ಕುಮಾರ ತೇಲಂಗಿ, ಮುಖಂಡರಾದ ಶ್ರೀಶೈಲ ಮೇಟಿ, ಅಪ್ಪು ನಾಡಗೌಡ ಮತ್ತಿತರರು ಉಪಸ್ಥಿತರಿದ್ದರು.

# ಅರಣ್ಯ ಸಂಪತ್ತು ಅರಣ್ಯ ಸಂರಕ್ಷಣೆ ನಮ್ಮೆಲ್ಲರ ಜವಾಬ್ದಾರಿ

- ಉದಯವಾಹಿನಿ,ಚಿಂಚೋಳಿ



ಉದಯವಾಹಿನಿ ಚಿತ್ರ

ಸಸಿಗಳು ನೆಡುವುದು ಮುಖ್ಯವಲ್ಲ ಅರಣ್ಯ ಸಂಪತ್ತು ಅರಣ್ಯ ಸಂರಕ್ಷಣೆ ಮಾಡುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ಶಾಸಕ ಡಾ.ಅವಿನಾಶ ಜಾಧವ ಹೇಳಿದರು.

ಪಟ್ಟಣದ ಹೊರವಲಯದಲ್ಲಿರುವ ಬೋಮ್ನಳ್ಳಿ ಹನುಮಾನ ದೇವಾಸ್ಥಾನದ ಆವರಣದಲ್ಲಿ ಪ್ರಾದೇಶಿಕ ವಲಯ ಅರಣ್ಯ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ವನಮಹೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.ಹೆಚ್ಚು ಗಿಡಮರಗಳು ಬೆಳೆಸುವುದರಿಂದ ಪರಿಸರ ಉತ್ತಮವಾಗಿರು ಜೋತೆ ಮಳೆಯು ಸಹ ಸಮಯಕ್ಕೆ ಬರುತ್ತದೆ ಹಾಗಾಗಿ ಅರಣ್ಯ ಸಂರಕ್ಷಣೆ ಜೋತೆ ಪ್ರತಿಯೋಬ್ಬರು ಸಸಿಗಳನ್ನು ನೆಟ್ಟು ಸಂರಕ್ಷಿಸಿ ಮರಗಿಡಗಳು ಬೆಳೆಸಬೇಕು.

ವನಮಹೊತ್ಸವ ಒಂದುದಿನದ ಕಾರ್ಯಕ್ರಮ ಮಾಡದೆ ಪ್ರತಿಯೋಬ್ಬರು ಮನೆಯ ಆವರಣ,ಮನೆಯ ಎದುರು ಹೊಲಗದ್ದೆಗಳಲ್ಲಿ ಮರಗಿಡಗಳು ಬೆಳೆಸಲು ಸಂಕಲ್ಪ ಮಾಡಬೇಕು,ಕಲ್ಯಾಣ ಕರ್ನಾಟಕ ಭಾಗದಲ್ಲಿ ಜಿಲ್ಲೆಗಳಿಗೆ ಹೋಲಿಸಿದರೆ ಚಿಂಚೋಳಿಯಲ್ಲಿ ಹೆಚ್ಚಿನ ಅರಣ್ಯ ಪ್ರದೇಶವಿದೆ, ಹಾಗಾಗಿ ಬಿಸಿಲಿನ ತಾಪಮಾನ ಕೂಡ ಕಡಿಮೆವಿದೆ ಎಂದರು.

ಎಸಿಎಫ್ ಸುನೀಲಕುಮಾರ ಚವ್ಹಾಣ,ಪ್ರಾದೇಶಿಕ ವಲಯ ಅರಣ್ಯಧೀಕಾರಿ ಜಗನ್ನಾಥ ಕೋರಳ್ಳಿ,ವೀರಭದ್ರಪ್ಪ, ಅಶೋಕ ಮೋಗದಂಪೂರ,ಕೆ.ಎಂ.ಬಾರಿ,ಭೀಮಶೇಟ್ಟಿ ಮುರುಡಾ,ವೀರೇಶ ಎಂಪಳ್ಳಿ, ನಾಗೇಂದ್ರಪ್ಪ,ಸುರೇಶ,ಜಗನ್ನಾಥ ಗುತ್ತೇದಾರ,ಕಾಶಿನಾಥ ನಾಟೀಕಾರ,ನಾರಾಯಣ, ಅಭಿಷೇಕ,ಅನೇಕರಿದ್ದರು.

> ಈಗಾಗಲೇ ಬೋಮ್ನಳ್ಳಿ ಹನುಮಾನ ದೇವಾಲಯದ ಅಭಿವೃದ್ಧಿಗಾಗಿ 05ಲಕ್ಷ ನೀಡಿದ್ದೇನೆ,ಬೀದರ ಮಾಜಿ ಸಂಸದ ಭಗವಂತ ಖೂಬಾ ಅವಧಿಯಲ್ಲಿ 05ಲಕ್ಷ ದೇವಾಲಯದ ಅಭಿವೃದ್ಧಿಗಾಗಿ ನೀಡಿದ್ದೇವೆ ಇನ್ನು ಹೆಚ್ಚಿನ ಅಭಿವೃದ್ಧಿಗಾಗಿ ಇನ್ನು ಹೆಚ್ಚಿನ ಅನುದಾನ ನೀಡುತ್ತೇನೆ ಈಗಾಗಲೇ ಕ್ಷೇತ್ರದ್ಯಾಂತ ದೇವಾಸ್ಥಾನಗಳ ಅಭಿವೃದ್ಧಿಗಾಗಿ 13ಕೋಟಿ ರೂ.ನೀಡಿದ್ದೇನೆ.
> :- ಡಾ.ಅವಿನಾಶ ಜಾಧವ ಶಾಸಕರು.ಚಿಂಚೋಳಿ.

# ನೀಟ್ ಕೈಬಿಡಲು ಕಾಂಗ್ರೆಸ್ ಒತ್ತಾಯ, ಬಳ್ಳಾರಿಯಲ್ಲಿ ಪ್ರತಿಭಟನೆ

- ಉದಯವಾಹಿನಿ, ಬಳ್ಳಾರಿ:

ನೀಟ್ ಪರೀಕ್ಷೆಯಲ್ಲಿನ ಪ್ರಶ್ನೆಪತ್ರಿಕೆ ಸೋರಿಕೆ, ವಿದ್ಯಾರ್ಥಿಗಳಿಗೆ ಆಗುತ್ತಿರುವ ಅನ್ಯಾಯ ಹಾಗೂ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರನ್ನು ಸಚಿವ ಸ್ಥಾನದಿಂದ ವಜಾಗೊಳಿಸುವಂತೆ ಆಗ್ರಹಿಸಿ ಬಳ್ಳಾರಿ ಜಿಲ್ಲಾ ಯುವ ಕಾಂಗ್ರೆಸ್ (ನಗರ) ವತಿಯಿಂದ ನಗರದಲ್ಲಿ ಪ್ರತಿಭಟನೆ ನಡೆಯಿತು.

ವಿದ್ಯಾರ್ಥಿಗಳ ಧ್ವನಿ' ಜಾಗೃತಿ ಅಭಿಯಾನದ ಅಂಗವಾಗಿ ಪ್ರತಿಭಟನೆ ಆಯೋಜಿಸಲಾಗಿತ್ತು.

ನಗರದ ಮುನ್ಸಿಪಲ್ ಮೈದಾನದಿಂದ ಆರಂಭಗೊಂಡು ಗಡಿಗಿ ಚೆನ್ನಪ್ಪ ವೃತ್ತದವರೆಗೆ ಮೆರವಣಿಗೆ ನಡೆಯಿತು. ಪ್ರತಿಭಟನೆಯಲ್ಲಿ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು, ಯುವ ಕಾಂಗ್ರೆಸ್ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಭಾಗವಹಿಸಿ ಕೇಂದ್ರ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು.

ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಕರ್ನಾಟಕ ರಾಜ್ಯ ಯುವ ಕಾಂಗ್ರೆಸ್ ಅಧ್ಯಕ್ಷ ಮಂಜುನಾಥ್ ಗೌಡ, 'ನೀಟ್ ಪರೀಕ್ಷೆಯ ಪ್ರಶ್ನೆಪತ್ರಿಕೆ ಸೋರಿಕೆಯಿಂದ ದೇಶದ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯ ಸಂಕಷ್ಟಕ್ಕೆ ಸಿಲುಕಿದೆ' ಎಂದು ಆರೋಪಿಸಿದರು.

ನೈತಿಕ ಹೊಣೆ ಹೊತ್ತು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡಬೇಕು. ಎನ್‌ಟಿಎ ಕಾರ್ಯವೈಖರಿಯ ಕುರಿತು ಸಮಗ್ರ ತನಿಖೆ ನಡೆಸಿ ಪರೀಕ್ಷಾ ವ್ಯವಸ್ಥೆಯಲ್ಲಿ ಪಾರದರ್ಶಕತೆ ತರಬೇಕು.

ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ರಾಜ್ಯ ಮಟ್ಟದ ಸಿಇಟಿ ಪರೀಕ್ಷಾ ವ್ಯವಸ್ಥೆಗೆ ಆದ್ಯತೆ ನೀಡಬೇಕು ಹಾಗೂ ವಾರ್ಷಿಕ ಶೈಕ್ಷಣಿಕ ವೇಳಾಪಟ್ಟಿಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕು' ಎಂದು ಒತ್ತಾಯಿಸಿದರು. 'ಕರ್ನಾಟಕದ ಸಿಇಟಿ ಪರೀಕ್ಷೆಯಲ್ಲಿ ಸಣ್ಣ ವಿಷಯಗಳಿಗೂ ಆಕ್ಷೇಪ ವ್ಯಕ್ತಪಡಿಸುವ ಬಿಜೆಪಿ ನಾಯಕರು, ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಮತ್ತು ವಿದ್ಯಾರ್ಥಿಗಳ ಭವಿಷ್ಯ ಹಾಳಾಗುತ್ತಿರುವ ಕುರಿತು ಮೌನ ವಹಿಸಿರುವುದು ಅವರ ದ್ವಂದ್ವ ನಿಲುವನ್ನು ಬಯಲಿಗೆಳೆಯುತ್ತದೆ' ಎಂದು ಟೀಕಿಸಿದರು.

# ಆಸ್ಪತ್ರೇಗಳ ಸ್ವಚ್ಛತೆ,ಶಿಸ್ತುಗೆ ಆದ್ಯತೆ ನೀಡಿದ ಡಾ.ಗಫಾರ್ ಸೇವೆ ಶ್ಲಾಘನೀಯ

- ಉದಯವಾಹಿನಿ,ಚಿಂಚೋಳಿ



ಉದಯವಾಹಿನಿ ಚಿತ್ರ

ಪಟ್ಟಣದ ಸರ್ಕಾರಿ ಸಾರ್ವಜನಿಕ ಆಸ್ಪತ್ರೇ ಸೇರಿದಂತೆ ಗ್ರಾಮೀಣ ಪ್ರದೇಶದ ಪ್ರಾಥಮಿಕ ಆರೋಗ್ಯ ಕೇಂದ್ರಗಳು,ಕ್ಷೇಮ ಆರೋಗ್ಯ ಕೇಂದ್ರಗಳ ಆಸ್ಪತ್ರೇಗಳು ಸ್ವಚ್ಛತೆ,ಶಿಸ್ತುಗೆ ಬಹಳಷ್ಟು ಆದ್ಯತೆ ನೀಡಿದ ಡಾ.ಮಹ್ಮದ್ ಗಫಾರ್ ಅಹ್ಮೇದ್ ಸೇವೆ ಶ್ಲಾಘನೀಯವಾಗಿದೆ ಎಂದು ತಹಸೀಲ್ದಾರ್ ಸುಬ್ಬಣ್ಣ ಜಮಖಂಡಿ ಬಣ್ಣಿಸಿದರು.

ಪಟ್ಟಣದ ತಾಲ್ಲೂಕಾ ಆಸ್ಪತ್ರೇಯ ಆವರಣದಲ್ಲಿ ತಾಲ್ಲೂಕಾ ಆರೋಗ್ಯಾಧಿಕಾರಿಯಾಗಿ ಯಶಸ್ವಿಯಾಗಿ ಸೇವೆ ಸಲ್ಲಿಸಿ,ಕಲಬುರಗಿ ಜಿಲ್ಲಾ ಕ್ಷಯರೋಗ ನಿರ್ಮೂಲನ ಅಧಿಕಾರಿಯಾಗಿ ಪದೋನ್ನತಿ ಹೊಂದಿರುವ ಡಾ.ಮಹ್ಮದ್ ಗಫಾರ್ ಅಹ್ಮೇದ್ ಅವರಿಗೆ ಹಮ್ಮಿಕೊಂಡಿದ್ದ ಬೀಳ್ಕೊಡುಗೆ ಸಮಾರಂಭದಲ್ಲಿ ಮಾತನಾಡಿದರು.

ಸರ್ಕಾರಿ ಆಸ್ಪತ್ರೆಗಳಲ್ಲಿ ಸ್ವಚ್ಛತೆ ಕಾಪಾಡಿಕೊಳ್ಳುವುದು ಸುಲಭದ ಕೆಲಸವಲ್ಲ,ಆದರೆ ಡಾ.ಗಫಾರ್ ಅಹ್ಮೇದ್ ಅವರ ಸಮರ್ಥ ನಾಯಕತ್ವ,ಆಡಳಿತಾತ್ಮಕ ಸಾಮರ್ಥ್ಯ ಹಾಗೂ ಸಿಬ್ಬಂದಿಯೊಂದಿಗೆ ಹೊಂದಾಣಿಕೆಯಿಂದ ಚಿಂಚೋಳಿ ಸರ್ಕಾರಿ ಆಸ್ಪತ್ರೆಯನ್ನು ಅತ್ಯಂತ ಸ್ವಚ್ಛ,ವ್ಯವಸ್ಥಿತ ಮತ್ತು ಜನಸ್ನೇಹಿ ಆಸ್ಪತ್ರೆಯನ್ನಾಗಿ ರೂಪಿಸಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸಾರ್ವಜನಿಕರಿಗೆ ಉತ್ತಮ ಆರೋಗ್ಯ ಸೇವೆ ಒದಗಿಸುವಲ್ಲಿ ಡಾ.ಗಫಾರ ಪಾತ್ರ ಗಮನಾರ್ಹವಾಗಿದೆ,ಅವರ ಕಾರ್ಯವೈಖರಿ ಇತರ ಅಧಿಕಾರಿಗಳಿಗೆ ಮಾದರಿಯಾಗಿದ್ದು,ಹೊಸ ಜವಾಬ್ದಾರಿಯಲ್ಲೂ ಅವರು ಇದೇ ರೀತಿಯ ನಿಷ್ಠೆ ಮತ್ತು ಸೇವಾಭಾವದಿಂದ ಕಾರ್ಯನಿರ್ವಹಿಸಿ ಇನ್ನಷ್ಟು ಯಶಸ್ಸುಗಳಿಸಲಿ ಎಂದು ಶುಭ ಹಾರೈಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಡಾ.ಮಹ್ಮದ್ ಗಫಾರ್ ಅಹ್ಮೇದ್ ಅವರು,ಚಿಂಚೋಳಿ ತಾಲೂಕು ಆರೋಗ್ಯಾಧಿಕಾರಿಯಾಗಿ ಸೇವೆ ಸಲ್ಲಿಸುವ ಅವಧಿಯಲ್ಲಿ ಅಧಿಕಾರಿಗಳು,ವೈದ್ಯರು, ಸಿಬ್ಬಂದಿ,ಜನಪ್ರತಿನಿಧಿಗಳು ಹಾಗೂ ಸಾರ್ವಜನಿಕರು ನೀಡಿದ ಸಹಕಾರವನ್ನು ಸ್ಮರಿಸಿದರು.

ಆರೋಗ್ಯ ಸೇವೆ ಎಂಬುದು ತಂಡದ ಕೆಲಸ ಎಲ್ಲರ ಸಹಕಾರದಿಂದಲೇ ಆಸ್ಪತ್ರೆಯಲ್ಲಿ ಸ್ವಚ್ಛತೆ,ಶಿಸ್ತು ಮತ್ತು ಉತ್ತಮ ಆರೋಗ್ಯ ಸೇವೆ ನೀಡಲು ಸಾಧ್ಯವಾಯಿತು,ಈ ಸಾಧನೆ ನನ್ನೊಬ್ಬನದ್ದಲ್ಲ,ಇಡೀ ಆರೋಗ್ಯ ಇಲಾಖೆಯ ಸಿಬ್ಬಂದಿಯ ಪರಿಶ್ರಮದ ಫಲವಾಗಿದೆ.

2002ರಿಂದ 2008ರವರೆಗೆ ಕುಂಚಾವರಂ ಆಸ್ಪತ್ರೇಯಲ್ಲಿ ಸೇವೆ ಪ್ರಾರಂಭಿಸಿ 2026ರವರೆಗೆ ಟಿಹೆಚ್‌ಓ ಮತ್ತು ಎಎಂಓ ಆಗಿ ಅನೇಕ ಏಳುಬೀಳು ಕಂಡರೂ ಸ್ಥಳಿಯವನ್ನಾಗಿ ನಾನು ಸ್ಥಳೀಯ ಸಾರ್ವಜನಿಕರ ಸೇವೆ ಪ್ರಮಾಣಿಕವಾಗಿ ಮಾಡಿ ಉತ್ತಮ ಗುಣಮಟ್ಟದ ಚಿಕಿತ್ಸೆ ನೀಡಿದ್ದೇನೆ ಹಾಗಾಗಿ ಸಾರ್ವಜನಿಕರ ಆಶೀರ್ವಾದದಿಂದಲ್ಲೇ ನನ್ನ ಎರಡು ಮಕ್ಕಳು ವೈದ್ಯರಾಗಿದ್ದಾರೆ ಅತ್ಯಂತ ಮೃದುವಾಗಿ ಹೇಳಿದರು.


ಡಿವೈಎಸ್ಪಿ ಸಂಗಮನಾಥ ಹಿರೇಮಠ,ಕೆ.ಎಂ.ಬಾರಿ, ಗಣಪತರಾವ, ಹಾಫೀಜ್,ಅಬ್ದುಲ್ ಹಮೀದ್,ಮಲ್ಲಿಕಾರ್ಜುನ ಪಾಲಾಮೂರ್,ಶಾಮರಾವ ಮೋಘಾ,ಸುರೇಶ ದೊಡ್ಡಮನಿ,ಆಸ್ಲಾಂ ಪಟೇಲ,ಮಾತನಾಡಿದರು.ನೂತನ ಟಿಹೆಚ್‌ಓ ಸೈಯದ್ ಲತೀಫ್ ಸ್ವಾಗತಿಸಿದರು,ಇದ್ರೀಸ್ ಪಟೇಲ ಮಾಸ್ಟರ್ ವಂದಿಸಿದರು.

ಈ ಸಂದರ್ಭದಲ್ಲಿ

ಚುನ್ನು ಪಟೇಲ್,ಮಸೂದ್ ಸೌದಾಗಾರ,ಮಖ್ದುಮ್ ಖಾನ್,ಮಸ್ತಾನ ಅಲಿ ಇಟಲಿ,ದೇವೀಂದ್ರಪ್ಪ ಹೋಳ್ಕರ,ಸುರೇಶ ಕೊರವಿ,ಎಎಂಓ ವೀರೇಂದ್ರ ಪಾಟೀಲ,ಸಿಇಓ ಕಾಶಿನಾಥ್ ಧನ್ನಿ,ಸಿಡಿಪಿಓ ಸವಿತಾ, ಮಲ್ಲಿಕಾರ್ಜುನ ಗಿರಿ,ಶೇಖ್ ಚಾಂದ್ ಸಾಬ,ಭೀಮರಾವ ಹೂಗಾರ,ನರೇಶ,ಅನೀಲ,ಮಕ್ಸೂದ್ ಅಲಿ,ರಾಜಶೇಖರ,ನೀಲಕಂಠ, ಡಾ.ಕಾಂಚನಾ,ಶೈಲಾ ಬಾನು,ಡಾ.ಸಫ್ನಾ,ಡಾ.ಸೋಹೇಬ್,ಡಾ.ಫೈಸಲ್,ಡಾ. ರಾಜೇಶ,ಸೇರಿದಂತೆ ನೂರಾರು ಆರೋಗ್ಯ ಇಲಾಖೆ ಸಿಬ್ಬಂದಿ ವರ್ಗದವರು,ರಾಜಕೀಯ ಮುಖಂಡರು ಇದ್ದರು.

# ಫುಟ್‌ಪಾತ್ ಒತ್ತುವರಿ ತೆರವಿಗೆ ಆಗ್ರಹಿಸಿ ಮನವಿ

- ಉದಯವಾಹಿನಿ, ಕೂಡ್ಲಿಗಿ:



ಉದಯವಾಹಿನಿ ಚಿತ್ರ

ಪಟ್ಟಣ ಪಂಚಾಯಿತಿ ವ್ಯಾಪ್ತಿಯ ಪಾದಚಾರಿ ಮಾರ್ಗ ಅತಿಕ್ರಮಣ ತೆರವುಗೊಳಿಸಿ ಸುಗಮ ಸಂಚಾರಕ್ಕೆ ಅನುಕೂಲ ಮಾಡಬೇಕು ಎಂದು ಒತ್ತಾಯಿಸಿ ಕರ್ನಾಟಕ ರಕ್ಷಣಾ ವೇದಿಕೆಯ ಪದಾಧಿಕಾರಿಗಳು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಎಚ್. ದಾದಾಪೀರ್ ಅವರಿಗೆ' ಮನವಿ ಸಲ್ಲಿಸಿದರು. ಪಟ್ಟಣದ ರಸ್ತೆಯ ಎರಡೂ ಬದಿಯ ಫುಟ್‌ಪಾತ್‌ಗಳ ಮೇಲೆ ಅಂಗಡಿಗಳು ಹಾಗೂ ತಾತ್ಕಾಲಿಕ ವ್ಯಾಪಾರ ಮಳಿಗೆ ಇರುವುದರಿಂದ ಪಾದಚಾರಿಗಳಿಗೆ ತೊಂದರೆಯಾಗಿದ್ದು, ಸಾರ್ವಜನಿಕರು ರಸ್ತೆ ಮೇಲೆ ಓಡಾಡುವ ಪರಿಸ್ಥಿತಿ ಎದುರಾಗಿದೆ.

ಸಂಬಂಧಿಸಿದ ಅಧಿಕಾರಿಗಳು ಸಾರ್ವಜನಿಕರ ಹಿತದೃಷ್ಟಿಯಿಂದ ಫುಟ್‌ಪಾತ್ ಅತಿಕ್ರಮಣ ತೆರವುಗೊಳಿಸಬೇಕು.ಇಲ್ಲವಾದಲ್ಲಿ ಪಟ್ಟಣ ಪಂಚಾಯಿತಿ ಎದುರು ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದ್ದಾರೆ.ಈ ವೇಳೆ ಕರವೇ ತಾಲ್ಲೂಕು ಅಧ್ಯಕ್ಷ ಕಾಟೇರ ಹಾಲೇಶ, ನಾಗರಾಜ, ಕೆ. ರಮೇಶ, ಪ್ರದೀಪ ಕುಮಾರ ಇದ್ದರು.

# ಲಾಭಾಂಶದ ಭರವಸೆ ನೀಡಿ ಲಕ್ಷಾಂತರ ರೂ. ಹೂಡಿಕೆ ವಂಚನೆ ಆರೋಪ

## ಮಹಿಳಾ ಸಂಘಟನೆ ಹೆಸರಲ್ಲಿ ಹಣ ಹೂಡಿಕೆ ಮಾಡಿಕೊಂಡು ಲಕ್ಷಾಂತರ ರೂ. ವಂಚಿಸಿದ ಆರೋಪದ ಮೇಲೆ ಇಬ್ಬರು ಮಹಿಳೆಯರನ್ನು ಬಂಧಿಸಲಾಗಿದೆ.

- ಉದಯವಾಹಿನಿ, ಬಾಗಲಕೋಟೆ:



ಉದಯವಾಹಿನಿ ಚಿತ್ರ

ಮಹಿಳಾ ಸಂಘಟನೆ ಮೂಲಕ ಹಣ ಹೂಡಿಕೆ ಮಾಡಿಕೊಂಡು ಲಕ್ಷಾಂತರ ರೂ. ವಂಚಿಸಿದ ಆರೋಪದ ಮೇಲೆ ಇಬ್ಬರು ಆರೋಪಿತೆಯರನ್ನು ಜಿಲ್ಲೆಯ ಬೀಳಗಿ ಪಟ್ಟಣದ ಪೊಲೀಸರು ಬಂಧಿಸಿದ್ದಾರೆ. ರಚನಾ ಬಂಟನೂರ ಹಾಗೂ ವಿದ್ಯಾಶ್ರೀ ಹಲ್ಲೂರು ಎಂಬವರನ್ನು ಬಂಧಿಸಿ, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ

1. 9 ಜನರ ವಿರುದ್ಧ ಪ್ರಕರಣ ದಾಖಲಾಗಿ
2. 8 ಮಂದಿಯನ್ನು ವಿಚಾರಣೆಗೆ ಒಳಪಡಿಸಲಾಗಿದೆ
3. 43.40 ಲಕ್ಷ ರೂ. ವಂಚನೆ ಬೆಳಕಿಗೆ
4. 200ಕ್ಕೂ ಹೆಚ್ಚು ರಿಜಿಸ್ಟರ್‌ಗಳು

ಎಂದು ಪೊಲೀಸರು ತಿಳಿಸಿದ್ದಾರೆ.

ಬೀಳಗಿ ಪೊಲೀಸ್ ಠಾಣೆಯಲ್ಲಿ ಶ್ರೀ ದುರ್ಗಾದೇವಿ ಮಹಿಳಾ ಗ್ರಾಮೀಣ ಅಭಿವೃದ್ಧಿ ಸಂಸ್ಥೆ ವಿರುದ್ಧ ಸಾರ್ವಜನಿಕರಿಗೆ ಆಕರ್ಷಕ ಲಾಭಾಂಶದ ಭರವಸೆ ನೀಡಿ, ಹಣ ಸಂಗ್ರಹಿಸಿ ವಂಚನೆ ಮಾಡಿರುವ ಆರೋಪದಡಿ ಬೀಳಗಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ವಿಶೇಷವಾಗಿ ಮಹಿಳೆಯರನ್ನು ಸಣ್ಣ - ಸಣ್ಣ ಗುಂಪುಗಳಾಗಿ ಸೇರಿಸಿ, ಮೂರು ವರ್ಷಗಳ ನಂತರ ಹೆಚ್ಚಿನ ಹಣ ಮರಳಿ ನೀಡುವುದಾಗಿ ಭರವಸೆ ನೀಡಿ ವಾರದ ಹಾಗೂ ತಿಂಗಳ ಕಂತುಗಳ ರೂಪದಲ್ಲಿ ಹಣ ಸಂಗ್ರಹಿಸಿರುವುದು ತನಿಖೆಯಲ್ಲಿ ಬೆಳಕಿಗೆ ಬಂದಿದೆ. ಸಂಸ್ಥೆಯ ಭರವಸೆಯನ್ನು ನಂಬಿ ಅನೇಕ ಮಹಿಳೆಯರು ತಮ್ಮ ದುಡಿಮೆ ಹಣವನ್ನು ಹೂಡಿಕೆ ಮಾಡಿದ್ದರು ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

43.40 ಲಕ್ಷ ರೂ. ವಂಚನೆ

ಈ ಪ್ರಕರಣದಲ್ಲಿ ಸಂಸ್ಥೆಯ ಲೆಕ್ಕಪರಿಶೋಧಕ ಸೇರಿದಂತೆ ಒಟ್ಟು 9 ಜನರ ವಿರುದ್ಧ ಪ್ರಕರಣ ದಾಖಲಾಗಿದ್ದು, ಇದುವರೆಗೆ 8 ಮಂದಿಯನ್ನು ವಿಚಾರಣೆಗೆ ಒಳಪಡಿಸಲಾಗಿದೆ. ಅದರಲ್ಲಿ ರಚನಾ ಬಂಟನೂರ ಹಾಗೂ ವಿದ್ಯಾಶ್ರೀ ಹಲ್ಲೂರು ಎಂಬವರನ್ನು ಬಂಧಿಸಿ, ಪೊಲೀಸರು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಸಂತ್ರಸ್ತರ ದೂರಿನ ಮೇರೆಗೆ, ಪೊಲೀಸರು ಸಂಸ್ಥೆಯ ಕಚೇರಿಯ ಮೇಲೆ ದಾಳಿ ನಡೆಸಿ, ಸುಮಾರು 200ಕ್ಕೂ ಹೆಚ್ಚು ರಿಜಿಸ್ಟರ್‌ಗಳು, ರಸೀದಿ ಪುಸ್ತಕಗಳು, ಕಂಪ್ಯೂಟರ್‌ಗಳು ಹಾಗೂ ಇತರ ಮಹತ್ವದ ದಾಖಲೆಗಳನ್ನು ವಶಪಡಿಸಿಕೊಂಡು ಪರಿಶೀಲನೆ ನಡೆಸಲಾಗಿದೆ. ಇದೇ ಸಮಯದಲ್ಲಿ ಸಹಕಾರ ಸಂಘಗಳ ಜಿಲ್ಲಾ ನಿಬಂಧಕರೂ ಸ್ಥಳಕ್ಕೆ ಭೇಟಿ ನೀಡಿ ದಾಖಲೆಗಳ ಪರಿಶೀಲನೆ ಮಾಡಿದ್ದಾರೆ. ವಶಪಡಿಸಿಕೊಂಡ ದಾಖಲೆಗಳು ಹಾಗೂ ಸಂತ್ರಸ್ತರಿಂದ ದಾಖಲಿಸಿಕೊಂಡಿರುವ ಹೇಳಿಕೆಗಳ ಆಧಾರದ ಮೇಲೆ, ಪ್ರಾಥಮಿಕವಾಗಿ ಸುಮಾರು 43.40 ಲಕ್ಷ ರೂ. ವಂಚನೆ ಮಾಡಿರುವುದು ಬೆಳಕಿಗೆ ಬಂದಿದೆ ಎಂದು ಪೊಲೀಸರು ಹೇಳಿದ್ದಾರೆ.

> ಹಣ ಹೂಡಿಕೆಗೂ ಮುನ್ನ ವಿಶ್ವಾಸಾರ್ಹತೆ ಪರಿಶೀಲಿಸಿ: ''ಸಾರ್ವಜನಿಕರು ಯಾವುದೇ ಸಂಸ್ಥೆ ಅಥವಾ ಹೂಡಿಕೆ ಯೋಜನೆಯಲ್ಲಿ ಹಣ ಹೂಡಿಕೆ ಮಾಡುವ ಮುನ್ನ ಅದರ ನೋಂದಣಿ, ಕಾನೂನುಬದ್ಧತೆ ಹಾಗೂ ವಿಶ್ವಾಸಾರ್ಹತೆ ಪರಿಶೀಲಿಸಿ, ಖಚಿತ ಹೆಚ್ಚಿನ ಲಾಭದ ಭರವಸೆ ನೀಡುವ ಯೋಜನೆಗಳ ಬಗ್ಗೆ ಎಚ್ಚರಿಕೆ ವಹಿಸಬೇಕು'' ಎಂದು ತಿಳಿಸಿದ್ದಾರೆ.
> ಬಾಗಲಕೋಟೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್

ಪ್ರಕರಣದಲ್ಲಿ ವಂಚನೆಯಾದ ಒಟ್ಟು ಹಣದ ಪ್ರಮಾಣ, ಇನ್ನಷ್ಟು ಸಂತ್ರಸ್ತರ ಮಾಹಿತಿ ಹಾಗೂ ಇತರ ಆರೋಪಿಗಳ ಪಾತ್ರದ ಕುರಿತು ಸಮಗ್ರ ತನಿಖೆ ಮುಂದುವರೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಸಂಸ್ಥೆಯಲ್ಲಿ ಹಣ ಹೂಡಿಕೆ ಮಾಡಿ ವಂಚನೆಗೆ ಒಳಗಾಗಿರುವ ಸಾರ್ವಜನಿಕರು ತಮ್ಮ ಬಳಿ ಇರುವ ರಸೀದಿಗಳು, ಪಾಸ್‌ಬುಕ್, ಠೇವಣಿ ದಾಖಲೆಗಳು ಹಾಗೂ ಇತರ ಸಂಬಂಧಿತ ದಾಖಲೆಗಳೊಂದಿಗೆ ಬೀಳಗಿ ಠಾಣೆಯನ್ನು ಸಂಪರ್ಕಿಸಿ ತನಿಖೆಗೆ ಸಹಕರಿಸುವಂತೆ ಪೊಲೀಸರು ಕೋರಿದ್ದಾರೆ.

### 43.40 ಲಕ್ಷ ರೂ. ವಂಚನೆ ಬೆಳಕಿಗೆ

**ಸಂತ್ರಸ್ತರ ದೂರಿನ ಮೇರೆಗೆ, ಪೊಲೀಸರು ಸಂಸ್ಥೆಯ ಕಚೇರಿಯ ಮೇಲೆ ದಾಳಿ ನಡೆಸಿ, ಸುಮಾರು 200ಕ್ಕೂ ಹೆಚ್ಚು ರಿಜಿಸ್ಟರ್‌ಗಳು, ರಸೀದಿ ಪುಸ್ತಕಗಳು, ಕಂಪ್ಯೂಟರ್‌ಗಳು ಹಾಗೂ ಇತರ ಮಹತ್ವದ ದಾಖಲೆಗಳನ್ನು ವಶಪಡಿಸಿಕೊಂಡು ಪರಿಶೀಲನೆ ನಡೆಸಲಾಗಿದೆ. ಇದೇ ಸಮಯದಲ್ಲಿ ಸಹಕಾರ ಸಂಘಗಳ ಜಿಲ್ಲಾ ನಿಬಂಧಕರೂ ಸ್ಥಳಕ್ಕೆ ಭೇಟಿ ನೀಡಿ ದಾಖಲೆಗಳ ಪರಿಶೀಲನೆ ಮಾಡಿದ್ದಾರೆ. ವಶಪಡಿಸಿಕೊಂಡ ದಾಖಲೆಗಳು ಹಾಗೂ ಸಂತ್ರಸ್ತರಿಂದ ದಾಖಲಿಸಿಕೊಂಡಿರುವ ಹೇಳಿಕೆಗಳ ಆಧಾರದ ಮೇಲೆ, ಪ್ರಾಥಮಿಕವಾಗಿ ಸುಮಾರು 43.40 ಲಕ್ಷ ರೂ. ವಂಚನೆ ಮಾಡಿರುವುದು ಬೆಳಕಿಗೆ ಬಂದಿದೆ ಎಂದು ಪೊಲೀಸರು ಹೇಳಿದ್ದಾರೆ.**

# ಮಿನಿ ನ್ಯೂಸ್

## ಬಸ್ ಸಂಚಾರ ಆರಂಭಕ್ಕೆ ಆಗ್ರಹ



ಉದಯವಾಹಿನಿ ಚಿತ್ರ

- ಉದಯವಾಹಿನಿ, ಮುದ್ದೇಬಿಹಾಳ:

ಪಟ್ಟಣದಿಂದ ನಾರಾಯಣಪುರ ಮಾರ್ಗಕ್ಕೆ ಪ್ರತಿದಿನ ಬೆಳಿಗ್ಗೆ 8.30ಕ್ಕೆ ಹಾಗೂ ನಾರಾಯಣಪುರದಿಂದ ಸಂಜೆ 5 ಗಂಟೆಗೆ ಬಸ್ ಸೇವೆ ಆರಂಭಿಸಬೇಕೆಂದು ಒತ್ತಾಯಿಸಿ, ವಿವಿಧ ಇಲಾಖೆಗಳ ನೌಕರರು, ಶಿಕ್ಷಕರು, ಬ್ಯಾಂಕ್ ಸಿಬ್ಬಂದಿ, ರೈತರು ಮತ್ತು ವಿದ್ಯಾರ್ಥಿಗಳು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ (ಕೆಎಸ್‌ಆರ್‌ಟಿಸಿ) ಘಟಕ ವ್ಯವಸ್ಥಾಪಕರಿಗೆ ಬುಧವಾರ ಮನವಿ ಸಲ್ಲಿಸಿದರು.

ಈ ಮಾರ್ಗದಲ್ಲಿ ಸಂಚರಿಸುವ ಸರ್ಕಾರಿ ನೌಕರರು ಮತ್ತು ವಿದ್ಯಾರ್ಥಿಗಳು ಸಾರಿಗೆ ಸೌಲಭ್ಯದ ಕೊರತೆಯಿಂದ ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ವಿಶೇಷವಾಗಿ ಕೆಜಿಐಡಿ ಆನ್‌ಲೈನ್ ಹಾಜರಾತಿ ವ್ಯವಸ್ಥೆಯಿಂದಾಗಿ ಸಮಯಕ್ಕೆ ಸರಿಯಾಗಿ ಕಚೇರಿ ಹಾಗೂ ತರಗತಿಗಳಿಗೆ ಹಾಜರಾಗಲು ಸಾಧ್ಯವಾಗುತ್ತಿಲ್ಲ ಎಂದು ಮನವಿಯಲ್ಲಿ ತಿಳಿಸಲಾಗಿದೆ. ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರ ಹಿತದೃಷ್ಟಿಯಿಂದ ಕೂಡಲೇ ಹೊಸ ಬಸ್ ಸೇವೆಯನ್ನು ಆರಂಭಿಸಬೇಕೆಂದು ಆಗ್ರಹಿಸಲಾಗಿದೆ. ಮನವಿ ಸಲ್ಲಿಸಿದವರಲ್ಲಿ ಶೋಭಾ ಪಾಟೀಲ್, ರೇಣುಕಾ ಬೇದಕಿನಾಳ, ಲಕ್ಷ್ಮಿ ಗೌಡರ, ರಿಜ್ವಾನ ಘಾಟೆ, ಶರಣಮ್ಮ ಗುರು ವಿನಮಠ, ಗೋಪಾಲ್, ರಮೇಶ್, ಶೇಕ್ ಸಾಬ್ ನದಾಫ್, ಅಶೋಕ್ (ಬ್ಯಾಂಕ್ ನೌಕರ), ಗೀತಾಂಜಲಿ, ಬಸಮ್ಮ ಸೇರಿದಂತೆ ಹಲವು ನೌಕರರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಪೌರಕಾರ್ಮಿಕರಿಗೆ ವೇತನ ವಿಳಂಬ ಬೇಡ ಎಂದು ಜಿಲ್ಲಾಧಿಕಾರಿ ಸೂಚನೆ

- ಉದಯವಾಹಿನಿ, ಉಡುಪಿ:

ಸ್ಥಳೀಯ ಸಂಸ್ಥೆಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ಪೌರ ಕಾರ್ಮಿಕರು, ಲೋಡರ್ಸ್, ಕ್ಲೀನರ್ ಹಾಗೂ ಡ್ರೈವರ್‌ಗಳಿಗೆ ಪ್ರತಿ ತಿಂಗಳ ವೇತನವನ್ನು ವಿಳಂಬವಿಲ್ಲದೆ ಪಾವತಿಸಬೇಕು. ಅದರ ಜೊತೆಗೆ ಅವರಿಗೆ ಇ.ಎಸ್.ಐ. ಹಾಗೂ ಪಿ.ಎಫ್ ಮೊತ್ತವನ್ನು ಪಾವತಿಸಿರುವ ಬಗ್ಗೆ ಅಧಿಕಾರಿಗಳು ಪರಿಶೀಲಿಸಬೇಕು ಎಂದು ಜಿಲ್ಲಾಧಿಕಾರಿ ಸ್ವರೂಪಾ ಟಿ.ಕೆ. ಅಧಿಕಾರಿಗಳಿಗೆ ಸೂಚನೆ ನೀಡಿದರು. ಮಣಿಪಾಲದ ರಜತಾದ್ರಿಯ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸೋಮವಾರ ನಡೆದ ಜಿಲ್ಲಾ ಮಟ್ಟದ ಸಫಾಯಿ ಕರ್ಮಚಾರಿಗಳ ಜಿಲ್ಲಾ ಜಾಗೃತ ಸಮಿತಿಯ ದ್ವಿತೀಯ ತ್ರೈಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಪೌರ ಕಾರ್ಮಿಕರ ಉತ್ತಮ ಆರೋಗ್ಯ ಹೊಂದಿ ಸದೃಢವಾಗಿ ಕಾರ್ಯ ನಿರ್ವಹಿಸಲು ಅನುಕೂಲವಾಗಲಿ ಎಂದು ಸರ್ಕಾರ ಪೌರ ಕಾರ್ಮಿಕರಿಗೆ ಸುರಕ್ಷತಾ ಪರಿಕರಗಳನ್ನು ನೀಡುತ್ತಿದೆ. ಪೌರ ಕಾರ್ಮಿಕರು ದೈನಂದಿನ ಕಾರ್ಯ ನಿರ್ವಹಿಸುವಾಗ ಸುರಕ್ಷತಾ ಪರಿಕರಗಳನ್ನು ಪೂರ್ಣ ಪ್ರಮಾಣದಲ್ಲಿ ಬಳಕೆ ಮಾಡಬೇಕು. ಈ ಬಗ್ಗೆ ಸ್ಥಳೀಯ ಸಂಸ್ಥೆಯ ಮುಖ್ಯಾಧಿಕಾರಿಗಳು ಮುತುವರ್ಜಿ ವಹಿಸಬೇಕು ಎಂದರು.ಸಫಾಯಿ ಕರ್ಮಚಾರಿಗಳ ಸರ್ವಾಂಗೀಣ ಅಭಿವೃದ್ಧಿಗೆ ಅನುಕೂಲವಾಗುವಂತೆ ಕೇಂದ್ರ, ರಾಜ್ಯ ಸರ್ಕಾರ ಜಾರಿಗೆ ತಂದಿರುವ ಯೋಜನೆಗಳು ಅವರಿಗೆ ತಲುಪುವಂತೆ ನೋಡಿಕೊಳ್ಳಬೇಕು ಎಂದರು.

## ಲಂಬಾಣಿ ಸಾಥಿಯಾಡಿ ಹಬ್ಬ ಸಡಗರದಿಂದ ಆಚರಣೆ

- ಉದಯವಾಹಿನಿ, ಮರಿಯಮ್ಮನಹಳ್ಳಿ:

ಲಂಬಾಣಿ ಜನಾಂಗದ ಹಬ್ಬಗಳಲ್ಲೊಂದಾದ ಸಾಥಿಯಾಡಿ (ಶೀತ್ಲಾ) ಹಬ್ಬವನ್ನು ಸಂಜೆ ಮರಿಯಮ್ಮನಹಳ್ಳಿ ತಾಂಡಾದಲ್ಲಿ ಸಡಗರದಿಂದ ಆಚರಿಸಿದರು. ಆಷಾಢ ಮಾಸ ಆರಂಭದ ಮೊದಲ ಆಚರಿಸುವ ಈ ಹಬ್ಬವನ್ನು ಆಷಾಢ ಹಬ್ಬ, ಸಾಥಿಯಾಡಿ (ಏಳು ಮಕ್ಕಳತಾಯಿ) ಹಬ್ಬ, ಶೀಘ್ರ ಹಬ್ಬ ಹಾಗೂ ಕೋಳಿ ಹಬ್ಬ ಎಂದು ಕರೆಯುತ್ತಾರೆ.

ಹಬ್ಬದ ಅಂಗವಾಗಿ ಸಂಜೆ ತಾಂಡಾದ ಹೊರವಲಯದ ಬಯಲಿನಲ್ಲಿ ಸೇರಿದ ಗ್ರಾಮಸ್ಥರು, ಅಲ್ಲಿ ಪ್ರತಿಷ್ಠಾಪಿಸಲಾದ ಏಳು ಕಲ್ಲಿನ ವಿಗ್ರಹಗಳನ್ನು ಹೊಂದಿರುವ ದೇವಿಗೆ ವಿಶೇಷ ಅಲಂಕಾರ ಮಾಡಿ ವಿಶೇಷ ಪೂಜೆ ಸಲ್ಲಿಸಿದರು. ತಾಂಡಾದಲ್ಲಿ ಯಾವುದೇ ರೀತಿಯ ರೋಗರುಜಿನಗಳು ಬಾರದಂತೆ ಹಾಗೂ ಈ ಬಾರಿ ಉತ್ತಮವಾದ ಮಳೆ ಬೆಳೆಯಾಗಲೆಂದು ಆಶಿಸಿ ದೇವಿಯಲ್ಲಿ ಪ್ರಾರ್ಥನೆ ಸಲ್ಲಿಸಿದರು. ನಂತರ ನೆರೆದಿದ್ದ ಭಕ್ತರಿಗೆ ಪ್ರಸಾದ ಹಂಚಿದರು. ಹೋಬಳಿ ವ್ಯಾಪ್ತಿಯ ಜಿ.ನಾಗಲಾಪುರ ತಾಂಡಾ, ಗುಂಡಾ ತಾಂಡಾ ಹಾಗೂ ತಾಳೇಬಸಾಪುರ ತಾಂಡಾದಲ್ಲಿ ಸಂಜೆ ಹಬ್ಬವನ್ನು ಸಡಗರ ಸಂಭ್ರಮದಿಂದ ಆಚರಿಸಿದರು.

## ಮಿನಿ ವಿಧಾನಸೌಧ ನಿರ್ಮಾಣಕ್ಕೆ ಒತ್ತಾಯ

- ಉದಯವಾಹಿನಿ, ಗಂಗಾವತಿ:

ನಗರದ ಬಾಬು ಜಗಜೀವನರಾಂ ವೃತ್ತದ ಬಳಿಯ ಹಳೆ ಪ್ರವಾಸಿ ಮಂದಿರ ಸ್ಥಳದಲ್ಲಿ ನೂತನ ಮಿನಿ ವಿಧಾನಸೌಧ, ರಂಗಮಂದಿರ ನಿರ್ಮಿಸಬೇಕು ಎಂದು ವಿಧಾನ ಪರಿಷತ್ ಮಾಜಿ ಸದಸ್ಯ ಎಚ್.ಆರ್ ಶ್ರೀನಾಥ ಶಾಸಕರಿಗೆ ಒತ್ತಾಯ ಮಾಡಿದ್ದಾರೆ. ಗಂಗಾವತಿ ಕೇಂದ್ರೀಯ ಬಸ್ ನಿಲ್ದಾಣದಿಂದ ಈಗಿರುವ ಮಿನಿ ವಿಧಾನಸೌಧ 3 ಕಿ.ಮೀ. ದೂರದಲ್ಲಿದ್ದು, ಅಗತ್ಯ ಕೆಲಸಗಳಿಗೆ ಸಾರ್ವಜನಿಕರು ಆಟೋಗಳಿಗೆ 80 ರಿಂದ 100 ಹಣ ನೀಡಿ ತೆರಳಬೇಕಾಗುತ್ತಿದೆ. ಗ್ರಾಮೀಣ ಬಡ ಜನರು ಅಷ್ಟೊಂದು ಹಣ ನೀಡಲು ಆಗದೆ ಕಾಲ್ನಡಿಗೆಯಿಂದಲೇ ತೆರಳುತ್ತಾರೆ. ಸಕಾಲಕ್ಕೆ ಬಸ್ ಸೌಲಭ್ಯವೇ ಇಲ್ಲ. ಹಾಗಾಗಿ ರೈತರಿಗೆ, ವಿದ್ಯಾರ್ಥಿಗಳಿಗೆ ಸರ್ಕಾರಿ ಕೆಲಸಗಳು ಮಾಡಿಸಿ ಕೊಳ್ಳಲು ತೆರಳು ತುಂಬ ಕಷ್ಟವಾಗುತ್ತಿದೆ. ಆದ್ದರಿಂದ ಹಳೆ ಪ್ರವಾಸಿ ಮಂದಿರ ನೆಲಸಮ ಮಾಡಿಸಿ ಆ ಸ್ಥಳದಲ್ಲಿ ಮಿನಿ ವಿಧಾನಸೌಧ ನಿರ್ಮಾಣ ಮಾಡಬೇಕು' ಎಂದು ಒತ್ತಾಯಿಸಿದ್ದಾರೆ. ಜೂನಿಯರ್ ಕಾಲೇಜು ಮೈದಾನದಲ್ಲಿರುವ ರಂಗಮಂದಿರ ತೆರವುಗೊಳಿಸಿ ಫುಡ್‌ಕೋರ್ಟ್ ನಿರ್ಮಾಣಕ್ಕೆ ನಗರಸಭೆ ಚಿಂತನೆ ನಡೆಸಿದ್ದು, ಕೂಡಲೇ ಈ ಯೋಚನೆ ಕೈಬಿಡಬೇಕುಎಂದು ಪ್ರಕಟಣೆಯಲ್ಲಿ ಒತ್ತಾಯಿಸಿದ್ದಾರೆ.

## ರಮ್ಮಿ ಆಡುತ್ತಿದ್ದ ವ್ಯಕ್ತಿ ಮೇಲೆ ಫೈರಿಂಗ್

- ಉದಯವಾಹಿನಿ, ಬೆಳಗಾವಿ:

ಇಲ್ಲಿನ ಜಿಮ್‌ಖಾನ್ ಕ್ಲಬ್‌ನಲ್ಲಿ ರಮ್ಮಿ ಆಡುತ್ತಿದ್ದ ವ್ಯಕ್ತಿಯ ಮೇಲೆ ದುಷ್ಕರ್ಮಿಗಳು ಫೈರಿಂಗ್ ಮಾಡಿ ಹತ್ಯೆಗೆ ಯತ್ನಿಸಿರುವ ಘಟನೆ ರಾತ್ರಿ ನಡೆದಿದೆ. ಕೈಯಲ್ಲಿ ಗನ್ ಹಿಡಿದು ಆರೋಪಿಗಳು ಹಲ್ಲೆ ಮಾಡುತ್ತಿರುವುದು ಮತ್ತು ಆರೋಪಿಗಳ ಕೈಯಿಂದ ವ್ಯಕ್ತಿ ಕ್ಷಣಾರ್ಧದಲ್ಲೇ ಪ್ರಾಣಾಪಾಯದಿಂದ ಪಾರಾಗಿರುವ ದೃಶ್ಯ ಸಿಸಿಟಿವಿಯಲ್ಲಿ ಸೆರೆಯಾಗಿದೆ. ಬೆಳಗಾವಿಯ ಪೊಲೀಸ್ ಕಮಿಷನರ್ ಕಚೇರಿ ಸಮೀಪದಲ್ಲೇ ಇರುವ ಜಿಮ್‌ಖಾನ್ ಕ್ಲಬ್‌ನಲ್ಲಿ ಸುರೇಶ್ ಜಾಲಗಾರ ಎಂಬುವರ ತಲೆಗೆ ಗನ್‌ದಿಂದ ಕುಕ್ಕಿ ಬಳಿಕ ಫೈರಿಂಗ್ ಮಾಡಲಾಗಿದೆ. ಫೈರಿಂಗ್ ಮಾಡುವ ಮುನ್ನವೇ ದುಷ್ಕರ್ಮಿಗಳನ್ನು ತಳ್ಳಿ ಸುರೇಶ್ ಸಿನಿಮೀಯ ರೀತಿಯಲ್ಲಿ ತಪ್ಪಿಸಿಕೊಂಡಿದ್ದಾರೆ. ಬಳಿಕ ತಕ್ಷಣ ಫೈರಿಂಗ್ ಮಾಡಿ ಹತ್ಯೆಗೆ ಯತ್ನಿಸಿದ್ದಾರೆ. ಸುರೇಶ್ ಅವರು ತಪ್ಪಿಸಿಕೊಂಡ ಬಳಿಕ ಹೊರಗೆ ಆರೋಪಿಗಳು ಮತ್ತೆ ಎರಡು ಸುತ್ತು ಗಾಳಿಯಲ್ಲಿ ಗುಂಡು ಹಾರಿಸಿ ಪರಾರಿ ಆಗಿದ್ದಾರೆ.

